# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ
29 ಫೆಬ್ರುವರಿ । ಗುರುವಾರ
29 February 2024

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 11 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26


## ತನಿಖೆಯಲ್ಲಿ ಪಾಕ್ ಪರ ಘೋಷಣೆ ಸಾಬೀತಾದರೆ ಕ್ರಮ, ದೇಶ ದ್ರೋಹಿಗಳ ಮಟ್ಟ ಹಾಕಬೇಕಿದೆ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ವಿಧಾನಸೌಧದ ಆವರಣದಲ್ಲಿ ನಿನ್ನೆ ಮಂಗಳವಾರ ನೂತನ ರಾಜ್ಯಸಭಾ ಸದಸ್ಯ ಡಾ ಸೈಯದ್ ನಾಸಿರ್ ಹುಸೇನ್ ಅಭಿಮಾನಿಗಳು 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೂಗಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿ ರಾಜಕೀಯ ಆರೋಪ–ಪ್ರತ್ಯಾರೋಪ ತೀವ್ರಗೊಂಡಿದ್ದು ಇಂದು ಬುಧವಾರ ವಿಧಾನ ಮಂಡಲದ ಉಭಯ ಸದನಗಳಲ್ಲಿ ತೀವ್ರ ಗದ್ದಲ–ಕೋಲಾಹಲ ಏರ್ಪಟ್ಟಿದೆ.


ಈ ವಿಚಾರವಾಗಿ ಮಾತನಾಡಿರುವ ಸಿಎಂ ಸಿದ್ದರಾಮಯ್ಯ, ವಿಡಿಯೊವನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ತನಿಖೆಗೆ ಕಳುಹಿಸಲಾಗಿದ್ದು, ಪಾಕಿಸ್ತಾನ ಪರ ಘೋಷಣೆ ಕೂಗಿರುವುದು ಸಾಬೀತಾದರೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ. ದೇಶ ದ್ರೋಹಿಗಳನ್ನು ಮಟ್ಟಹಾಕಬೇಕಿದೆ ಎಂದು ಹೇಳಿದ್ದಾರೆ.

ಪಾಕಿಸ್ತಾನ ಪರ ಘೋಷಣೆ ಕೂಗಿದ್ದಾರೆಯೇ ಎಂಬ ಬಗ್ಗೆ ಮೊದಲು ತನಿಖೆಯಾಗಬೇಕಿದೆ. ಅದಕ್ಕೆ ಸಂಬಂಧಿಸಿದ ವಿಡಿಯೋ ತುಣುಕುಗಳನ್ನು ಈಗಾಗಲೇ ವಿಧಿವಿಜ್ಞಾನ ಪ್ರಯೋಗಾಯಕ್ಕೆ ತನಿಖೆಗೆ ಕಳುಹಿಸಿಕೊಟ್ಟಿದ್ದೇವೆ. ಘೋಷಣೆ ಕೂಗಿದ್ದು ನಿಜವೇ ಆಗಿದ್ದರೆ ಕ್ರಮ ಕೈಗೊಳ್ಳುತ್ತೇವೆ. ತಪ್ಪಿತಸ್ಥರು ಯಾರೇ ಆಗಿರಲಿ, ಅವರ ಮೇಲೆ ಕಠಿಣ ಕ್ರಮ ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿದ್ದಾರೆ.

ಘಟನೆ ಸಂಬಂಧ ಒಬ್ಬೊಬ್ಬರು ಒಂದೊಂದು ರೀತಿಯ ಹೇಳಿಕೆ ನೀಡುತ್ತಿದ್ದಾರೆ. ಕೆಲವರು 'ನಾಸಿರ್ ಸಾಬ್' ಎಂಬ ಘೋಷಣೆ ಕೂಗಲಾಗಿದೆ ಎಂದರೆ, ಇನ್ನು ಕೆಲವರು 'ಪಾಕಿಸ್ತಾನ' ಪರ ಘೋಷಣೆ ಎನ್ನುತ್ತಿದ್ದಾರೆ ಎಂದು ಗೃಹ ಸಚಿವ ಜಿ ಪರಮೇಶ್ವರ ಹೇಳಿದ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಅವರ ಪ್ರತಿಕ್ರಿಯೆ ಸಹ ಬಂದಿದೆ. ಘಟನೆ ಸಂಬಂಧ ಕಾನೂನು ಮತ್ತು ಸುವ್ಯವಸ್ಥೆ ಎಡಿಜಿಪಿ ಹಿತೇಂದ್ರ ಹಾಗೂ ನಗರ ಪೊಲೀಸ್ ಆಯುಕ್ತ ದಯಾನಂದ ಅವರು ಇಂದು ಬೆಳಗ್ಗೆ ಗೃಹ ಸಚಿವರನ್ನು ಭೇಟಿಯಾಗಿ ಮಾಹಿತಿ ನೀಡಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಸಚಿವ ಪ್ರಿಯಾಂಕ್ ಖರ್ಗೆ, ಇದು ಕಾಲ್ಪನಿಕ ಘಟನೆಯಾಗಿದೆ ಎಂದಿದ್ದಾರೆ. ರಾಜ್ಯಸಭೆ ಚುನಾವಣೆಯಲ್ಲಿ ಮೈತ್ರಿ ಪಕ್ಷಗಳಿಗೆ ಮುಖಭಂಗವಾಗಿದೆ. ಘೋಷಣೆ ಕೂಗಿರುವ ಆಡಿಯೋದಲ್ಲಿ ಸೈಯದ್ ಸಾಬ್, ನಾಸಿರ್ ಹುಸೇನ್ ಜಿಂದಾಬಾದ್ ಅಂತ ಹೇಳಿದ್ದಾರೆ. ನಾವು ಜವಬ್ದಾರಿಯುತವಾಗಿಯೇ ಪರಿಶೀಲನೆ ಮಾಡಲು ಹೇಳಿದ್ದೆವು. ಪಾಕಿಸ್ತಾನದ ಪರವಾಗಿ ಯಾವುದೇ ಘೋಷಣೆ ಕೂಗಿಲ್ಲ. ವಿಡಿಯೋ ತುಣುಕುಗಳನ್ನು ವಿಧಿ ವಿಜ್ಞಾನ ಪ್ರಯೋಗಾಲಯಕ್ಕೂ ಕಳುಹಿಸಿಕೊಡಲಾಗಿದೆ ಎಂದು ಹೇಳಿದರು.

## ಇಂದು ಸಿಎಂ ಸಿದ್ದುಗೆ 'ಜಾತಿಗಣತಿ ವರದಿ' ಸಲ್ಲಿಕೆ: ಜಯಪ್ರಕಾಶ್ ಹೆಗಡೆ



ಬೆಂಗಳೂರು: ತೀವ್ರ ಕುತೂಹಲ ಮೂಡಿಸಿದ್ದಂತ ಜಾತಿಗಣತಿ ವರದಿಯನ್ನು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗಡೆಯವರು ಇಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಸಲ್ಲಿಸಲಿದ್ದಾರೆ.

ಈ ಕುರಿತಂತೆ ಮಾಹಿತಿ ಹಂಚಿಕೊಂಡಿರುವಂತ ಅವರು, ಇಂದು ಜಾತಿಗಣತಿ ವರದಿಯನ್ನು ಸಲ್ಲಿಸೋದಕ್ಕೆ ಕೊನೆಯ ದಿನವಾಗಿದೆ. ಈ ಹಿನ್ನಲೆಯಲ್ಲಿ ಸಿಎಂ ಸಿದ್ಧರಾಮಯ್ಯ ಅವ–ರಿಗೆ ಇಂದು ಜಾತಿಗಣತಿ ವರದಿಯನ್ನು ಸಲ್ಲಿಸಲಾಗುತ್ತದೆ ಎಂಬುದಾಗಿ ತಿಳಿಸಿದ್ದಾರೆ.

ಲೋಕಸಭಾ ಚುನಾವಣೆಗೆ ಮುನ್ನವೇ ರಾಜ್ಯದಲ್ಲಿ ಜಾತಿಗಣತಿ ವರದಿ ಪ್ರಕರಗೊಳ್ಳುವ ಸಾಧ್ಯತೆ ಇದೆ. ಜಾತಿ ಗಣತಿಯ ವರದಿಯ ಆಧಾರದ ಮೇಲೆ ಲೋಕಸಭಾ ಚುನಾವಣೆಯನ್ನು ಎದುರಿಸೋದಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರ ಮುಂದಾಗಿದೆ ಎನ್ನಲಾಗುತ್ತಿದೆ. ಆ ಬಗ್ಗೆ ನಾಳೆಯವರೆಗೂ ಕಾದು ನೋಡಬೇಕಿದೆ.

## ರಾಜ್ಯದ ವಿದ್ಯುತ್ ಬಳಕೆದಾರರಿಗೆ ಗುಡ್ ನ್ಯೂಸ್ ಕೊಟ್ಟ ಸರ್ಕಾರ



ಬೆಂಗಳೂರು: ಹೊಸ ದರ ಪರಿಷ್ಕರಣೆ ಮಾಡಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು (ಏಇಖಅ) ವಿದ್ಯುತ್ ದರ ಇಳಿಕೆ ಮಾಡಿ ಬುಧವಾರ ಆದೇಶ ಹೊರಡಿಸಿದೆ.

ಆ ಮೂಲಕ ರಾಜ್ಯದ ವಿದ್ಯುತ್ ಬಳಕೆದಾರರಿಗೆ ಗುಡ್ ನ್ಯೂಸ್ ನೀಡಿದೆ. ಲೋಕಸಭೆ ಚುನಾವಣೆ ಬೆನ್ನಲ್ಲೇ ಗ್ರಾಹಕರಿಗೆ ಬಂಪರ್ ಕೊಡುಗೆ ನೀಡಿದೆ. 100 ಯೂನಿಟ್ಗಿಂತ ಹೆಚ್ಚು ಬಳಸುವವ–ರಿಗೆ ಪ್ರತಿ ಯೂನಿಟ್ ಮೇಲೆ 1 ರೂಪಾಯಿ 10 ಪೈಸೆ ಇಳಿಕೆ ಮಾಡಲಾಗಿದೆ. ಅದೇ ರೀತಿಯಾಗಿ ವಾಣಿಜ್ಯ ಬಳಕೆದಾರರಿಗೆ 1 ರೂಪಾಯಿ 25 ಪೈಸೆ ದರ ಇಳಿಕೆ ಮಾಡಲಾಗಿದೆ. ಆಸ್ಪತ್ರೆ ಮತ್ತು ಶಿಕ್ಷಣ ಸಂಸ್ಥೆಗಳಿಗೆ ಯೂನಿಟ್ಗೆ 40 ಪೈಸೆ ಕಡಿತ ಮಾಡಲಾಗಿದ್ದು, ಖಾಸಗಿ ಏತ ನೀರಾವರಿ ಬಳಕೆದಾರರಿಗೆ 2 ರೂಪಾಯಿ ಇಳಿಕೆ ಮಾಡಲಾಗಿದೆ. 100 ಯೂನಿಟ್ಗಿಂತ ಹೆಚ್ಚು ಬಳಸುವವರಿಗೆ ಮಾತ್ರ ಹೊಸ ದರ ಮಾರ್ಚ್ 1ರಿಂದಲೇ ಅನ್ವಯವಾಗಲಿದೆ.

## ನದಿಗೆ ಉರುಳಿದ ಬಸ್ 31 ಪ್ರಯಾಣಿಕರು ಸಾವು




ಮಾಲಿ: ಬಸ್ಸೊಂದು ಸೇತುವೆಯಿಂದ ಉರುಳಿಬಿದ್ದಿದ್ದು, ಸುಮಾರು 31 ಜನರು ಸಾವನ್ನಪ್ಪಿದ ಘಟನೆ ಬೆಳಕಿಗೆ ಬಂದಿದೆ. ಪಶ್ಚಿಮ ಆಫ್ರಿಕಾದ ಕನಿಬಾದಲ್ಲಿ ಈ ಘಟನೆ ನಡೆದಿದೆ. ಸಂಜೆ ಸುಮಾರು 5 ಗಂಟೆಗೆ ಬಸ್ ಅಪಘಾತಕ್ಕೀಡಾಗಿದೆ. ಬುರ್ಕಿನಾ ಫಾಸೊಗೆ ತೆರಳುತ್ತಿದ್ದಾಗ ದುರ್ಘಟನೆ ನಡೆದಿದೆ. ಸೇತುವೆಯಿಂದ ಉರುಳಿದ ಬಸ್ ನದಿ ನೀರಿಗೆ ಬಿದ್ದಿದೆ.

ಬಸ್ನಲ್ಲಿ ಮಾಲಿಯನ್ನರು ಮತ್ತು ಇತರ ನಾಗರೀಕರು ಪ್ರಯಾಣಿಸುತ್ತಿದ್ದರು. ವಾಹನವನ್ನು ನಿಯಂತ್ರಿಸಲು ಚಾಲಕ ವಿಫಲವಾದ ಕಾರಣ ಬಸ್ ಅಪಘಾತಕ್ಕೀಡಾಗಿದೆ ಎಂದು ಅಲ್ಲಿನ ಸಾರಿಗೆ ಸಚಿವಾಲಯ ತಿಳಿಸಿದೆ.

ಆಫ್ರಿಕಾದ ಬಹುತೇಕನ ರಸ್ತೆಗಳು ಹದಗೆಟ್ಟಿದ್ದು, ಸಾರ್ವಜನಿಕ ವಾಹನಗಳಲ್ಲಿ ಓವರ್ ಲೋಡ್ ಆಗಿ ಪ್ರಯಾಣಿಸುತ್ತಾರೆ. ಇದರಿಂದಾಗಿ ವಾಹನ ನಿಯಂತ್ರಿಸಲಾಗದೆ ಆಗಾಗ ಅಪಘಾತ ಪ್ರಕರಣಗಳು ಬೆಳಕಿಗೆ ಬರುತ್ತಿರುತ್ತವೆ.

## ರಾಷ್ಟ್ರಧ್ವಜಕ್ಕೆ ಅವಮಾನ ಮಾಡಬೇಡಿ: ಸಭಾಧ್ಯಕ್ಷ ಯು.ಟಿ.ಖಾದರ್



ಬೆಂಗಳೂರು: ರಾಷ್ಟ್ರಧ್ವಜಕ್ಕೆ ಅವಮಾನ ಮಾಡಬೇಡಿ ಒಂದು ವೇಳೆ ಮಾಡಿದರೆ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ವಿಧಾನಸಭೆಯಲ್ಲಿ ತಿಳಿಸಿದರು. ಬೆಳಿಗ್ಗೆ ಸದನ ಸಮಾವೇಶಗೊಂಡಾಗ ಸೋಮವಾರ ಸಕಾಲಕ್ಕೆ ಆಗಮಿಸಿದ್ದ ಶಾಸಕರ ಹೆಸರುಗಳನ್ನು ಪ್ರಕಟಿಸಿದ ನಂತರ ಸಭಾಧ್ಯಕ್ಷರು ಅಧಿಕಾರಿಗಳಿಂದ ನನಗೆ ಮಾಹಿತಿ ಬಂದಿದೆ.

ರಾಷ್ಟ್ರಧ್ವಜವನ್ನು ಸದನದೊಳಗೆ ತಂದಿದ್ದಾರೆ ಎಂಬ ಮಾಹಿತಿ ಇದೆ. ನನ್ನ ಜವಾಬ್ದಾರಿ, ಕರ್ತವ್ಯವನ್ನು ನಿಭಾಯಿಸಬೇಕು. ಯಾರೂ ಕೂಡ ಅವಮಾನ ಮಾಡಬಾರದು. ಸದನದ ಹೊರಗೆ ನಡೆದಿರುವ ಘಟನೆ ಬಗ್ಗೆ ಚರ್ಚೆ ಮಾಡಲು ಅಡ್ಡಿಯಿಲ್ಲ. ಅದರ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಆಗ ವಿರೋಧಪಕ್ಷದ ಶಾಸಕರ ಆರ್.ಅಶೋಕ್ ಸೇರಿದಂತೆ ಬಿಜೆಪಿಯ ಎಲ್ಲಾ ಶಾಸಕರು ಆಕ್ರೋಶ ವ್ಯಕ್ತಪಡಿಸಿ, ಅಗೌರವ ನಾವು ಮಾಡಿಲ್ಲ, ಒಂದು ವೇಳೆ ನಾವು ಮಾಡಿದ್ದರೆ ಕಾನೂನು ಕ್ರಮ ಜರುಗಿಸಿ ಎಂದು ಸಿಡಿಮಿಡಿಗೊಂಡರು. ಅಶೋಕ್ ಮಾತನಾಡಿ, ಭಾರತದ ಧ್ವಜವನ್ನು ಹಿಡಿದು ಬರುವುದು ತಪ್ಪೇ? ಯಾರು ನಿಮಗೆ ಬಾವುಟವನ್ನು ತಂದಿದ್ದಾರೆ ಎಂದು ಹೇಳಿದರು ಎಂದು ಪ್ರಶ್ನಿಸಿದರಲ್ಲದೆ, ಭಾರತದ ಧ್ವಜವನ್ನು ಹಿಡಿಯಲು ನಮಗೆ ಹೆಮ್ಮೆ ಎನಿಸುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಆಡಳಿತ ಪಕ್ಷದ ಹಲವು ಸದಸ್ಯರು ಎದ್ದು ನಿಂತು ಪ್ರತಿಯಾಗಿ ಮಾತನಾಡಲು ಮುಂದಾದಾಗ ಗೊಂದಲ ಉಂಟಾಯಿತು. ಆಗ ಸಭಾಧ್ಯಕ್ಷರು ಸದನದ ಹೊರಗೆ ನಡೆದಿರುವ ವಿಚಾರ ಬಗ್ಗೆ ಸರ್ಕಾರ ತನಿಖೆ ಮಾಡಲಿ, ತಕ್ಷಣ ತಪ್ಪಿತಸ್ಥರಿದ್ದರೆ ಕ್ರಮ ಕೈಗೊಳ್ಳಲಿ, ಅಂತಹ ವಿಚಾರವನ್ನು ಯಾರೂ ಸಹಿಸುವುದಿಲ್ಲ ಎಂದರು.

## ಬೆಳಗಾವಿಯಲ್ಲಿ ಅನ್ಯಭಾಷಿಕ ಫಲಕ ತೆರವುಗೊಳಿಸಿದ ಪಾಲಿಕೆ ಅಧಿಕಾರಿಗಳು




ಬೆಳಗಾವಿ: ಬೆಳಗಾವಿಯಲ್ಲಿ ಕನ್ನಡ ನಾಮಫಲಕ ಕಡ್ಡಾಯಗೊಳಿಸುವ ಕಾರ್ಯಾಚರಣೆ ಶುರುವಾಗಿದ್ದು, ಇಂದು ಬೆಳ್ಳಂ ಬೆಳಗ್ಗೆ ಪಾಲಿಕೆ ಅಧಿಕಾ–ರಿಗಳ ತಂಡ ನಗರದ ವಿವಿಧೆಡೆ ಸುತ್ತಾಡಿ, ಅನ್ಯಭಾಷಿಕ ಫಲಕಗಳನ್ನು ತೆರವುಗೊಳಿದರು.

ಬೆಳಗಾವಿ ಮಹಾನಗರ ಪಾಲಿಕೆಯ ಆಯುಕ್ತ ಪಿ ಎನ್ ಲೋಕೇಶ್ ಅವರ ಕನ್ನಡದ ಇಚ್ಛಾಶಕ್ತಿಯ ಪರಿಣಾಮ ಬೆಳಗಾವಿಯಲ್ಲಿ ಕನ್ನಡದ ಅನುಷ್ಠಾನಕ್ಕೆ ಚಾಲನೆ ಸಿಕ್ಕಿದೆ. ಕಳೆದ ದಿನಗಳಿಂದ ಹಿಂದೆ ಕರವೇ ರಾಜ್ಯಾಧ್ಯಕ್ಷ ಟಿ.ಎ ನಾರಾಯಣಗೌಡ ಬೆಳಗಾವಿಯಲ್ಲಿ ಕರವೇ ರಾಜ್ಯಕಾರ್ಯಕಾರಿಣಿ ಸಭೆ ನಡೆಸಿ,ಕನ್ನಡ ನಾಮಫಲಕ ಕಡ್ಡಾಯದ ಕುರಿತು ಗಡುವು ನೀಡಿ ಬೆಂಗಳೂರಿಗೆ ತೆರಳುತ್ತಿದ್ದಂತೆಯೇ ಬೆಳಗಾವಿಯಲ್ಲಿ ಕನ್ನಡ ನಾಮಫಲಕ ಕಡ್ಡಾಯಗೊಳಿಸುವ ಕಾರ್ಯಾಚರಣೆ ಶುರುವಾಗಿದೆ. ಪಾಲಿಕೆ ಆಯುಕ್ತ ಪಿ.ಎನ್ ಲೋಕೇಶ್ ಅವರ ಸೂಚನೆ ಮೇರೆಗೆ ಪಾಲಿಕೆ ಆರೋಗ್ಯಾಧಿಕಾರಿ ಸಂಜೀವ ನಾಂದ್ರೆ ನೇತ್ರತ್ವದ ತಂಡ ಇಂದು ಅನ್ಯಭಾಷಿಕ ಫಲಕಗಳನ್ನು ಗುರುತಿಸಿ ಅಂಗಡಿ ಮಾಲೀಕರಿಗೆ ಕನ್ನಡ ನಾಮಫಲಕ ಅಳವಡಿಸುವ ಎಚ್ಚರಿಕೆ ನೀಡಿದೆ. ಕನ್ನಡ ನಾಮಫಲಕ ಅಳವಡಿಸದಿದ್ದರೆ ಅಂಗಡಿಯ ಲೈಸನ್ಸ್ ರದ್ದು ಗೊಳಿಸುವ ಎಚ್ಚರಿಕೆ ನೀಡಲಾಗಿದೆ.

ರಾಜ್ಯ ಸರ್ಕಾರದ ಆದೇಶದಂತೆ ಅಂಗಡಿ–ಮುಂಗಟ್ಟು, ಮಾಲ್‌ಗಳ ನಾಮಫಲಕಗಳಲ್ಲಿ ಕಡ್ಡಾಯವಾಗಿ 60% ಕನ್ನಡ ಭಾಷೆ ಬಳಸುವಂತೆ ನೀಡಲಾಗಿದ್ದ ಗಡುವು ಇಂದಿಗೆ ಕೊನೆಗೊಳ್ಳಲಿದೆ. ರಾಜ್ಯದ ವಿವಿಧೆಡೆ ಸಂಪೂರ್ಣವಾಗಿ ನಿಯಮ ಪಾಲನೆಯಾಗದ ಕಾರಣ ಕಡ್ಡಾಯ ಕನ್ನಡ ನಾಮಫಲಕ ಅಳವಡಿಸಲು ಅಂಗಡಿ ಮಾಲೀಕರಿಗೆ ಸರ್ಕಾರ ಕಾಲಾವಕಾಶ ನೀಡಿತ್ತು. ಇನ್ಮುಂದೆ ನಿಯಮ ಪಾಲಿಸದಿದ್ದರೆ ವ್ಯಾಪಾರಸ್ಥರ ಲೈಸನ್ಸ್ ರದ್ದುಪಡಿಸುವ ಕ್ರಮ ಅನುಸರಿಸಬೇಕು ಎಂದು ಕನ್ನಡಪರ ಹೋರಾಟಗಾರರು ಈಗಾಗಲೇ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

## ಪೊಲೀಸರ ಕೈಗೆ ಸಿಗದೆ ತಲೆಮರೆಸಿಕೊಂಡ ಹಿರಿಯ ನಟಿ ಜಯಪ್ರದಾ



ನವದೆಹಲಿ: ನೀತಿ ಸಂಹಿತೆ ಉಲ್ಲಂಘನೆಗೆ ಸಂಬಂಧಿಸಿದ ಎರಡು ಪ್ರಕರಣಗಳಲ್ಲಿ ಬಿಜೆಪಿ ಮಾಜಿ ಸಂಸದೆ ಮತ್ತು ಚಲನಚಿತ್ರ ನಟಿ ಜಯಪ್ರದಾ ಅವರನ್ನ 'ತಲೆಮರೆಸಿಕೊಂಡಿದ್ದಾರೆ' ಎಂದು ಪರಿಗಣಿಸಲಾಗಿದೆ.

ಜಯಪ್ರದಾ ವಿರುದ್ಧ ಪದೇ ಪದೇ ನೋಟಿಸ್ಗಳು ಮತ್ತು ಜಾಮೀನು ರಹಿತ ವಾರಂಟ್ಗಳ ಹೊರತಾಗಿಯೂ ನ್ಯಾಯಾಲಯದ ವಿಚಾರಣೆಗೆ ಹಾಜರಾಗಲು ವಿಫಲವಾದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಹಲವಾರು ಬಾರಿ ಜಾಮೀನು ರಹಿತ ವಾರಂಟ್ (NBW) ಹೊರಡಿಸಿದ ನಂತರವೂ ಅವರು ಹಾಜರಾಗದ ಕಾರಣ ರಾಂಪುರದ ಎಂಪಿ / ಎಂಎಲ್ಎ ನ್ಯಾಯಾಲಯವು ಮಂಗಳವಾರ ಅಡಿಕಅ ಆದೇಶ 82 ಅನ್ನು ಹೊರಡಿಸಿದೆ. ಈ ಬಗ್ಗೆ ಹಿರಿಯ ಪ್ರಾಸಿಕ್ಯೂಷನ್ ಅಧಿಕಾರಿ ಅಮರನಾಥ್ ತಿವಾರಿ ಅವರು ಜಯಪ್ರದಾ ವಿರುದ್ಧ 2019 ರ ಚುನಾವಣಾ ನೀತಿ ಸಂಹಿತೆ ಪ್ರಕರಣವನ್ನು ರಾಮ್ಪುರದ ವಿಶೇಷ ಸಂಸದ / ಶಾಸಕರ ನ್ಯಾಯಾಲಯದಲ್ಲಿ ಕೆಮ್ರಿ ಪೊಲೀಸ್ ಠಾಣೆ ಮತ್ತು ಸ್ವರ್ ಪೊಲೀಸ್ ಠಾಣೆಯಲ್ಲಿ ದಾಖಲಿಸಲಾಗಿದೆ ಎಂದು ಹೇಳಿದರು.

## ಮಹಿಳೆ ಬೆದರಿಸಿ ಹಣ ವಸೂಲಿ ಮಾಡಿದ ನಾಲ್ವರು ಸಂಚಾರಿ ಪೊಲೀಸರು ಅಮಾನತು




ಬೆಂಗಳೂರು: ಪ್ರಯಾಣಿಕರನ್ನು ತಡೆದು ಹಣ ವಸೂಲಿ ಮಾಡುತ್ತಿದ್ದ ನಾಲ್ವರು ಟ್ರಾಫಿಕ್ ಪೊಲೀಸರನ್ನು ಅಮಾನತು ಮಾಡಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ದಯಾನಂದ್ ಆದ–'ೇಶ ಹೊರಡಿಸಿದ್ದಾರೆ.

ಮಹಿಳೆಯೊಬ್ಬರನ್ನು ಬೆದರಿಸಿ ಹಣ ಸುಲಿಗೆ ಮಾಡಿದ ಪ್ರಕರಣಕ್ಕೆ ಸಂಬಂಧಪಟ್ಟಂತೆ ನಾಲ್ವರು ಸಂಚಾರಿ ಪೊಲೀಸರನ್ನು ಅಮಾನತು ಮಾಡಿ ಆದೇಶ ಹೊರಡಿಸಲಾಗಿದೆ.

ಜೀವನ್ ಭೀಮಾ ನಗರ ಸಂಚಾರ ಠಾಣೆ ಇನ್ಸ್ ಪೆಕ್ಟರ್ ವೆಂಕಟಾಚಲಪತಿ, ಹೆಡ್ ಕಾನ್ಸ್ ಟೇಬಲ್ ಗಳಾದ ಗಿರೀಶ್, ಹುಚ್ಚುಸಾಬ್ ಹಾಗೂ ಕಾನ್ಸ್ ಟೇಬಲ್ ಬಸಪ್ಪ ಅಮಾನತುಗೊಂಡವರು.

ಕಳೆದವಾರ ಇಸ್ರೋ ಜಂಕ್ಷನ್ ಬಳಿ ಡ್ರಂಕ್ ಆಂಡ್ ಡ್ರೈವ್ ತಪಾಸಣೆ ನಡೆಸಲಾಗುತ್ತಿತ್ತು.

ಆ ಸಂದರ್ಭದಲ್ಲಿ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡಿರುವುದಾಗಿ ಆರೋಪಿಸಿ ಮಹಿಳೆಯನ್ನು ಬೆದರಿಸಿ 8000 ರೂಪಾಯಿ ಸುಲಿಗೆ ಮಾಡಿದ ಆರೋಪ ಸಂಚಾರಿ ಪೊಲೀಸರ ವಿರುದ್ಧ ಕೇಳಿಬಂದಿತ್ತು.

ಈ ಬಗ್ಗೆ ಮಹಿಳೆಯ ತಂದೆ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಿದ್ದರು. ಈ ಹಿನ್ನೆಲೆಯಲ್ಲಿ ತನಿಖೆಗೆ ಆದೇಶಿಸಲಾಗಿತ್ತು. ಪೂರ್ವ ಸಂಚಾರಿ ಡಿಸಿಪಿ ಕುಲದೀಪ್ ಕುಮಾರ್ ಜೈನ್ ಇಲಖೆ ಮಟ್ಟದ ತನಿಖೆ ನಡೆಸಿ ವರದಿ ನೀಡಿದ್ದರು. ಈ ಹಿನ್ನೆಲೆಯಲ್ಲಿ ನಾಲ್ವರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.

## ಜನನ ಮರಣ ಪ್ರಮಾಣ ಪತ್ರ ಪಡೆಯಲು ಜನರ ಪರದಾಟ




ಬೆಳಗಾವಿ: ಮಹಾನಗರ ಪಾಲಿಕೆ ಆವರಣದಲ್ಲಿ ಜನನ ಮರಣ ಪ್ರಮಾಣ ಪತ್ರ ಪಡೆಯಲು ಜನರು ಅನಗತ್ಯ ಪರದಾಟ ಅನುಭವಿಸುತ್ತಿದ್ದಾರೆ. ಪಾಲಿಕೆಯ ಆಡಳಿತ ವ್ಯವಸ್ಥೆಯ ಲೋಪದಿಂದಾಗಿ ಜನರು ಘಂಟೆಗಟ್ಟಲೆ ಕಾಯುವ ಸ್ಥಿತಿ ನಿರ್ಮಾಣವಾಗಿದೆ.

**ಕೌಂಟರ್‌ಗಳಲ್ಲಿ ಗೊಂದಲ:**

ಸರಿಯಾದ ವ್ಯವಸ್ಥೆ ಇಲ್ಲದ ಕಾರಣ ಯಾವ ಕೌಂಟರ್‌ನಲ್ಲಿ ಯಾವ ಪ್ರಮಾಣ ಪತ್ರ ಸಿಗುತ್ತದೆ ಎಂಬ ಗೊಂದಲ ಜನರಲ್ಲಿ ಮನೆಮಾಡಿದೆ.

ಕೌಂಟರ್‌ಗಳು ಸರಿಯಾದ ಸಮಯಕ್ಕೆ ತೆರೆಯದಿರುವುದು, ತೆರೆದರೂ ಸರ್ವರ್ ಸಮಸ್ಯೆಗಳಿಂದಾಗಿ ಜನರು ಪರದಾಡ ಬೇಕಾಗಿದೆ.

**ವಿರೋಧ ಪಕ್ಷದ ಟೀಕೆ:**

ಈ ಸಮಸ್ಯೆಗಳನ್ನು ಗಮನಿಸಿದ ಬೆಳಗಾವಿ ಮಹಾನಗರ ಪಾಲಿಕೆ ವಿರೋಧ ಪಕ್ಷದ ನಾಯಕ ಮುಝುಮೀಲ ಧೋನಿ ಸ್ಥಳಕ್ಕೆ ಧಾವಿಸಿ, ಸಂಬಂಧಪಟ್ಟ ಅಧಿಕಾರಿಗಳನ್ನು ಕರೆದು ವ್ಯವಸ್ಥೆಯನ್ನು ಸರಿಪಡಿಸಲು ಸೂಚಿಸಿದರು.

**ಆರೋಗ್ಯ ಅಧಿಕಾರಿಗೆ ತರಾಟೆ:**

ಮಹಾನಗರ ಪಾಲಿಕೆ ಆರೋಗ್ಯ ಅಧಿಕಾರಿ ಈ ವ್ಯವಸ್ಥೆಯನ್ನು ಆದಷ್ಟು ಬೇಗ ಸರಿಪಡಿಸ ಬೇಕು ಮತ್ತು ಜನರಿಗೆ ಯಾವುದೇ ತೊಂದರೆ ಆಗದಂತೆ ಗಮನಹರಿಸ ಬೇಕೆಂದು ಧೋನಿ ತರಾಟೆಗೆ ತೆಗೆದುಕೊಂಡರು.

**ಪರಿಹಾರದ ನಿರೀಕ್ಷೆ:**

ಈ ಘಟನೆಯಿಂದಾಗಿ ಬೆಳಗಾವಿ ನಗರದ ಜನರಲ್ಲಿ ಆಕ್ರೋಶ ಉಂಟಾಗಿದೆ. ಪಾಲಿಕೆ ಆಡಳಿತ ಈ ಸಮಸ್ಯೆಗೆ ಶೀಘ್ರ ಪರಿಹಾರ ಕಂಡುಕೊಂಡು ಜನರಿಗೆ ಉತ್ತಮ ಸೇವೆ ಒದಗಿಸ ಬೇಕೆಂಬ ನಿರೀಕ್ಷೆ ವ್ಯಕ್ತವಾಗಿದೆ.

**ಇತರ ಸಮಸ್ಯೆಗಳು:**

ಕೆಲವೊಮ್ಮೆ ಸಿಬ್ಬಂದಿ ಕೊರತೆಯಿಂದಾಗಿ ಕೌಂಟರ್‌ಗಳು ಬಂದ್ ಆಗಿರುತ್ತವೆ.

ಜನರಿಗೆ ಸ್ಪಷ್ಟ ಮಾಹಿತಿ ನೀಡುವಲ್ಲಿ ಸಿಬ್ಬಂದಿ ವಿಫಲವಾಗುತ್ತಾರೆ.

ಲಂಚದ ಆರೋಪಗಳು ಕೂಡ ಕೇಳಿಬರುತ್ತವೆ.

**ಪರಿಹಾರಕ್ಕಾಗಿ ಸಲಹೆಗಳು:**


ಪಾಲಿಕೆ ಆನ್‌ಲೈನ್ ವ್ಯವಸ್ಥೆಯನ್ನು ಸುಧಾ–ರಿಸಬೇಕು.

ಸಿಬ್ಬಂದಿಗೆ ಸೂಕ್ತ ತರಬೇತಿ ನೀಡಬೇಕು.

ಜನರಿಗೆ ಸ್ಪಷ್ಟ ಮಾಹಿತಿ ನೀಡಲು ಸ್ಪಷ್ಟ ಫಲಕಗಳನ್ನು ಅಳವಡಿಸಬೇಕು.

ಲಂಚ ರುಷುವತ್ತಿನ ಆರೋಪಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳಬೇಕು.

ಈ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಕಂಡುಕೊಂಡು ಜನರಿಗೆ ಉತ್ತಮ ಸೇವೆ ಒದಗಿಸಬೇಕಾದ ಜವಾಬ್ದಾರಿ ಪಾಲಿಕೆ ಆಡಳಿತದ ಮೇಲಿದೆ.



## ಬಿಟ್ ಕಾಯಿನ್ ಪ್ರಕರಣ: ಮತ್ತೊಬ್ಬ ಇನ್ಸ್‌ಪೆಕ್ಟರ್ ಅರೆಸ್ಟ್, ಡಿವೈಎಸ್‌ಪಿ ಶ್ರೀಧರ್ ಎಸ್ಕೇಪ್

ಬೆಂಗಳೂರು: ಬಿಟ್ ಕಾಯಿನ್ ಹಗರಣಕ್ಕೆ ಸಂಬಂಧಿಸಿದಂತೆ ಪ್ರಕರಣದ ಆರೋಪಿ ಇನ್ಸ್‌ಪೆಕ್ಟರ್ನ್ನು ಸಿಐಡಿ ಎಸ್‌ಐಟಿ ಬಂಧಿಸಿದೆ. ಇನ್ಸ್‌ಪೆಕ್ಟರ್ ಲಕ್ಷ್ಮಿಕಾಂತಯ್ಯ ಬಂಧಿತ ಆರೋಪಿ. ಈ ಲಕ್ಷ್ಮೀಕಾಂತಯ್ಯ ಈ ಹಿಂದೆ ಬಿಟ್ ಕಾಯಿನ್ ಪ್ರಕರಣದ ತನಿಖಾಧಿಕಾರಿ ಆಗಿದ್ದರು. ಇಂದು ಬೆಳಗ್ಗೆ ಇವರನ್ನು ಬಂಧಿಸಿದ್ದಾರೆ.

ಇತ್ತ ಪ್ರಕರಣದ ಪ್ರಮುಖ ಆರೋಪಿ ಡಿವೈಎಸ್ಪಿ ಶ್ರೀಧರ್ ಪೂಜಾರ್ ಅವರನ್ನು ಬಂಧಿಸುವುದಕ್ಕೆ ತೆರಳಿದಾಗ ಆರೋಪಿ ಪೊಲೀಸರ ಕಾರಿಗೆ ಗುದ್ದಿ ಎಸ್ಕೇಪ್ ಆದ ಘಟನೆ ನಡೆದಿದೆ.

ಬಿಟ್ ಕಾಯಿನ್ ಹಗರಣಕ್ಕೆ ಸಂಬಂಧಿಸಿದಂತೆ ಪ್ರಕರಣದ ಪ್ರಮುಖ ಆರೋಪಿಯನ್ನು ಬಂಧಿಸುವುದಕ್ಕೆ ತೆರಳಿದಾಗ ಆರೋಪಿ ಡಿವೈಎಸ್ಪಿ ಶ್ರೀಧರ್ ಪೂಜಾರ್, ಪೊಲೀಸರ ಕಾರಿಗೆ ಗುದ್ದಿ ಎಸ್ಕೇಪ್ ಆದ ಘಟನೆ ನಿನ್ನೆ ಕಾಫಿ ಬೋರ್ಡ್ ಸಿಗ್ನಲ್ ಬಳಿ ನಡೆದಿದೆ.

ಎಸ್‌ಐಟಿ ತಂಡದ ಇನ್ಸ್ಪೆಕ್ಟರ್ ಅನಿಲ್ ಮತ್ತು ಅವರ ತಂಡ ಬಂಧಿಸಲು ಹೋಗಿದ್ದ ಸಂದರ್ಭದಲ್ಲಿ ಈ ಘಟನೆ ನಡೆದಿದೆ. ಇನ್ನು ಶ್ರೀಧರ್ ಪೂಜಾರ್ ವಿರುದ್ಧ 307 ಕೊಲೆ ಯತ್ನ, 353 ಸರ್ಕಾರಿ ಕರ್ತವ್ಯಕ್ಕೆ ಅಡ್ಡಿ ಪಡಿಸಿದ ಹಿನ್ನಲೆ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲು ಮಾಡಲಾಗಿದೆ.

## ವೀರ ರಾಣಿ ಬೆಳವಡಿ ಮಲ್ಲಮ್ಮನ ಉತ್ಸವ-2024 ಉತ್ಸವಕ್ಕೆ ಅದ್ದೂರಿ ಚಾಲನೆ ನೀಡಿದ ಶಾಸಕ ಮಹಾಂತೇಶ ಕೌಜಲಗಿ



ಬೆಳಗಾವಿ: ಬೆಳವಡಿ ಸಂಸ್ಥಾನದ ವೀರ ಜ್ಯೋತಿಯನ್ನು ಬೆಳವಡಿಯ ಮಲ್ಲಮ್ಮನ ವೃತ್ತದಲ್ಲಿ ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ ಅವರು ಸಡಗರದಿಂದ ಬರಮಾಡಿಕೊಂಡು, ಧ್ವಜಾರೋಹಣ ನೆರವೇರಿಸುವ ಮೂಲಕ ವೀರರಾಣಿ ಬೆಳವಡಿ ಮಲ್ಲಮ್ಮನ ಉತ್ಸವ–20204 ಕ್ಕೆ ಅದ್ದೂ–ರಿಯಾಗಿ ಚಾಲನೆ ನೀಡಿದರು.

ಬೆಳವಡಿ ಮಲ್ಲಮ್ಮನ ಹುಟ್ಟೂರು ಶಿರಸಿ ಸಮೀಪದ ಸೋಂದಾದಿಂದ ಜಿಲ್ಲೆಯ ವಿವಿಧೆಡೆ ಸಂಚರಿಸಿ, ಬೆಳವಡಿಗೆ ಆಗಮಿಸಿದ ವೀರ ಜ್ಯೋತಿಗೆ ಪೂಜೆ ಸಲ್ಲಿಸುವುದರ ಮೂಲಕ ಸಂಭ್ರಮದಿಂದ ಬರಮಾಡಿಕೊಳ್ಳಲಾಯಿತು. ಬಳಿಕ ಬೆಳವಡಿ ಮಲ್ಲಮ್ಮನ ಪುತಳಿಗೆ ಶಾಸಕ ಮಹಾಂತೇಶ ಕೌಜಲಗಿ ಹಾಗೂ ಗಣ್ಯಮಾನ್ಯರಿಂದ ಮಾಲಾರ್ಪಣೆ ಮಾಡಲಾಯಿತು.

**ವಿವಿಧ ಕಲಾ ತಂಡಗಳ ಆಕರ್ಷಕ ಮೆರವಣಿಗೆ:**

ಡೊಳ್ಳುಕುಣಿತ, ಗೊಂಬೆಕುಣಿತ, ಕುದುರೆಕುಣಿತ, ಜನಪದವಾದ್ಯಗಳು, ನಗಾರಿ, ಕುಂಭ ಹೊತ್ತ ನೂರಾರು ಮಹಿಳೆಯರು, ಕಥಕ್ಕಳಿ ತಂಡಗಳ ಮೆರವಣಿಗೆಯು ನೋಡುಗರ ಕಣ್ಣಿಗೆ ಮೆರಗು ನೀಡಿದವು.

ಬೆಳವಡಿ ಮಲ್ಲಮ್ಮನ ವೃತ್ತದಿಂದ ಆರಂಭಗೊಂಡ ಮೆರವಣಿಗೆಯು ಬೆಳವಡಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

ಈ ಸಂದರ್ಭದಲ್ಲಿ ಬೈಲಹೊಂಗಲ ಉಪ ವಿಭಾಗಾಧಿಕಾರಿ ಪ್ರಭಾವತಿ ಫಕಿರಪೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಆರ್.ನಾಗರಾಜ, ಗ್ರಾಮ ಪಂಚಾಯತಿ ಅಧ್ಯಕ್ಷ ಚಂದ್ರಶೇಖರಯ್ಯ ಕಾ–ರಿಮನಿ, ಉಪಾಧ್ಯಕ್ಷರು, ಬೆಳವಡಿ ಗ್ರಾಮಸ್ಥರು ಹಾಜರಿದ್ದರು. ಬೈಲಹೊಂಗಲ ಸೇರಿದಂತೆ ಸುತ್ತಮುತ್ತಲಿನ ವಿವಿಧ ಗ್ರಾಮಗಳ ಸಾವಿರಾರು ಜನರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

## 15 ಬಿಜೆಪಿ ಶಾಸಕರನ್ನ ಅಮಾನತುಗೊಳಿಸಿದ ಸ್ಪೀಕರ್

ಶಿಮ್ಲಾ: ಹಿಮಾಚಲ ಪ್ರದೇಶದಲ್ಲಿ ರಾಜ್ಯಸಭಾ ಚುನಾವಣೆ ಫಲಿತಾಂಶದ ಬಳಿಕ ಅನಿರೀಕ್ಷಿತ ರಾಜಕೀಯ ಬೆಳವಣಿಗೆಗಳು ನಡೆಯುತ್ತಿವೆ. ಹಿಮಾಚಲ ಪ್ರದೇಶ ವಿಧಾನಸಭೆ ಸ್ಪೀಕರ್ ಕುಲದೀಪ್ ಸಿಂಗ್ ಪಠಾನಿಯಾ ಅವರು ಸ್ಪೀಕರ್ ಚೇಂಬರ್‌ನಲ್ಲಿ ಘೋಷಣೆಗಳನ್ನು ಕೂಗಿದ ಆರೋಪದ ಮೇಲೆ ಪ್ರತಿಪಕ್ಷ ನಾಯಕ ಜೈರಾಮ್ ಠಾಕೂರ್ ಸೇ–ರಿದಂತೆ 15 ಬಿಜೆಪಿ ಶಾಸಕರನ್ನು ಬುಧವಾರ ಅಮಾನತುಗೊಳಿಸಿದ್ದಾರೆ.

ವಿಪಿನ್ ಸಿಂಗ್ ಪರ್ಮಾರ್, ರಣಧೀರ್ ಶರ್ಮಾ, ಲೋಕೇಂದರ್ ಕುಮಾರ್, ವಿನೋದ್ ಕುಮಾರ್, ಹನ್ಸ್ ರಾಜ್, ಜನಕ್ ರಾಜ್, ಬಲ್ಬೀರ್ ವರ್ಮಾ, ತ್ರಿಲೋಕ್ ಜಮ್ವಾಲ್, ಸುರೇಂದರ್ ಶೋರಿ, ದೀಪ್ ರಾಜ್, ಪುರಣ್ ಠಾಕೂರ್, ಇಂದರ್ ಸಿಂಗ್ ಗಾಂಧಿ, ದಿಲೀಪ್ ಠಾಕೂರ್ ಮತ್ತು ಇಂದರ್ ಸಿಂಗ್ ಅಮಾನತುಗೊಂಡಿದ್ದಾರೆ.

ರಾಜ್ಯಸಭಾ ಚುನಾವಣೆಯು ಕಾಂಗ್ರೆಸ್ ಸರ್ಕಾರ ಅಲ್ಪಮತದಲ್ಲಿದೆ ಎಂದು ಸ್ಪಷ್ಟಪಡಿಸಿದೆ. ಮುಖ್ಯಮಂತ್ರಿ ಸುಖವಿಂದರ್ ಸಿಂಗ್ ಸುಖು ರಾಜೀನಾಮೆ ನೀಡಬೇಕು ಎಂದು ಜೈರಾಮ್ ಠಾಕೂರ್ ಒತ್ತಾಯಿಸಿದ್ದರು. ಹಿಮಾಚಲ ಪ್ರದೇಶದ ಏಕೈಕ ರಾಜ್ಯಸಭಾ ಸ್ಥಾನವನ್ನು ಮಂಗಳವಾರ ಬಿಜೆಪಿ ಗೆದ್ದುಕೊಂಡಿದೆ. ಈ ಅನಿರೀಕ್ಷಿತ ಫಲಿತಾಂಶದಿಂದ ಕಾಂಗ್ರೆಸ್‌ಗೆ ಆಘಾತ ಎದುರಾಗಿದೆ. ಬಿಜೆಪಿಯು ವಿಶ್ವಾಸಮತಕ್ಕೆ ಒತ್ತಾಯಿಸಲಿದೆಯೇ ಎಂಬ ಪ್ರಶ್ನೆ ಉದ್ಭವಿಸಿದ್ದು, ಹಿಮಾಚಲ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಜೈರಾಮ್ ಠಾಕೂರ್ ಅವರು ಬೆಳಗ್ಗೆ ರಾಜ್ಯಪಾಲರನ್ನು ಭೇಟಿ ಮಾಡಿದ್ದರು.

# ಮಹಿಳೆಯರು ವೈಜ್ಞಾನಿಕ ವಿಚಾರಗಳನ್ನು ಅಳವಡಿಸಿಕೊಳ್ಳಲು ಕರೆ

ಧಾರವಾಡ: ಸಮಾಜವು ಹೆಣ್ಣುಮಕ್ಕಳನ್ನು ಅನಿಷ್ಟ ಕನಿಷ್ಟವೆಂದು ಪುರಷ-ರಿಗಿಂತ ಕೀಳಾಗಿ ನಡೆದುಕೊಳ್ಳುತ್ತಿದ್ದಾರೆ. ಮೂಢನಂಬಿಕೆಯಿಂದಾಗಿ ಅಗೌರವಕ್ಕೆ ಒಳಪಡಿಸಿದ್ದರಿಂದ ಹೆಚ್ಚಿನ ಭ್ರೂಣ ಹತ್ಯೆಗಳು ನಡೆಯುತ್ತಿವೆ ಎಂದು ಸದಸ್ಯ ಕಾರ್ಯದರ್ಶಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಹಿರಿಯ ಸಿವಿಲ್ ಜಿಲ್ಲಾ ನ್ಯಾಯಾಧಿಶ ಪರಶುರಾಮ ಎಫ್. ದೊಡ್ಡಮನಿ ಅವರು ಹೇಳಿದರು.

ಅವರು ಬೆಳಗ್ಗೆ (ಫೆ.28) ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಆಯೋಜಿಸಲಾದ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿಯಲ್ಲಿ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ ಬಾಲ್ಯವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ, ಮಹಿಳಾ ಮತ್ತು ಅನೈತಿಕ ಸಾಗಾಣಿಕೆ ಹಾಗೂ ಪಿಎನ್ಡಿಟಿ-ಆ್ಯಕ್ಟ್ 1994ರ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ಮಹಿಳೆಯರನ್ನು ನಮ್ಮ ಭಾರತ ಗೌರವಿಸಿ, ನದಿ ಹಾಗೂ ಭೂಮಿಯನ್ನು ತಾಯಿಗೆ ಹೋಲಿಸಲಾಗಿದೆ. ಸಮಾಜದಲ್ಲಿ ಯಾರನ್ನ ಗೌರವಿಸಬೇಕು, ಯಾರನ್ನು ಆದ-'ರ್ಶವಾಗಿರಿಸಿಕೊಳ್ಳಬೇಕು ಅವರನ್ನು ನಾವು ಮೂಲೆಗೆ ತಳ್ಳಿದ್ದೇವೆ. ಸುಳ್ಳುಗಳನ್ನು ಸೃಷ್ಟಿಸಿ ಅದಕ್ಕೆ ವೈಭವಿಕರಣ ಮಾಡಿ ಅದನ್ನೇ ವಿಜೃಂಭಿಸಿ ಜನರ ತಲೆಯ ಒಳಗೆ ಅವೈಜ್ಞಾನಿಕ, ಮೂಢನಂಬಿಕೆಗಳನ್ನು ತುಂಬಿ ಮಹಿಳೆಯರನ್ನು ಗೌರವ ಸ್ಥಾನದಿಂದ ದೂರವಿಡಲಾಗಿದೆ ಎಂದು ಹೇಳಿದರು.



ಜನರು ಗ್ರಹಣದ ಸಂದರ್ಭದಲ್ಲಿ ಹೆಚ್ಚಾಗಿ ಮೂಢನಂಬಿಕೆಗೆ ಒತ್ತು ಕೊಟ್ಟು, ಮನೆಯಲ್ಲಿ ನೀರು ಕುಡಿಯಬಾರದು, ಊಟ ಮಾಡಬಾರದು, ಮನೆಯ ಹೊರಗಡೆ ಹೋಗಬಾರದು, ಗ್ರಹಣದ ಸಂದರ್ಭದಲ್ಲಿ ಮನೆಯಲ್ಲಿರುವ ನೀರು ಚೆಲ್ಲುವುದು ಎಂಬ ಹಲವಾರು ಮೂಢನಂಬಿಕೆಗಳ ಜೊತೆ ವಾಸ್ತವದ ವಿರುದ್ಧವಾಗಿ ನಡೆದುಕೊಳ್ಳುತ್ತಾರೆ. ಇಂದಿನ ಯುಗದಲ್ಲಿ ಆಕಾಶಕ್ಕೆ ರಾಕೆಟ್ ಹಾ-ರಿಸುತ್ತೇವೆ, ಮಂಗಳ ಗ್ರಹಕ್ಕೆ ಮಾನವನನ್ನು ಕಳಿಸುತ್ತಿದ್ದೇವೆ ಹೀಗೆ ತಂತ್ರಜ್ಞಾನಗಳು ಮುಂದುವರೆದರು ಸಹ ಜನರಲ್ಲಿರುವ ಮೌಢ್ಯತೆಗಳು ಕಡಿಮೆಯಾಗಲು ಸಾಧ್ಯವಾಗಿಲ್ಲ. ಮಹಿಳೆಯರು ಸಮಾಜದಲ್ಲಿ ನಡೆಯುವಂತಹ ಘಟನೆಗಳಿಗೆ ಕಿವಿ ಕೊಡದೆ ವೈಜ್ಞಾನಿಕವಾಗಿ ಚಿಂತಿಸಿ ಜೀವನ ನಡೆಸುವುದು ಪ್ರಮುಖವಾಗಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಹೆಚ್ಚು ಭ್ರೂಣಹತ್ಯೆ ಕಂಡುಬರುತ್ತಿವೆ. ಭ್ರೂಣಹತ್ಯೆ ಮಾಡುವುದು ಕೊಲೆಯ ಪ್ರಕರಣಕಿಂತ ಗಂಭೀರವಾದ ಅಪರಾಧವಾಗಿದೆ ಎಂದು ಹೇಳಿದರು.

ಬಸವಣ್ಣನವರು ಸಮಾಜದಲ್ಲಿ ನಡೆಯುತ್ತಿದ್ದ ಗಂಡು, ಹೆಣ್ಣು ಎಂಬ ಲಿಂಗ ತಾರತಮ್ಯದ ವಿರುದ್ಧ 900 ವರ್ಷಗಳ ಹಿಂದೆಯೇ ಸಮಾನತೆಗಾಗಿ ಶ್ರಮಿಸಿದರು. ಪ್ರತಿಯೊಬ್ಬರು ಬಸವಣ್ಣನವರ ಆದರ್ಶಗಳನ್ನು ಪಾಲಿಸಬೇಕು. ಮನೆಯಲ್ಲಿ ಮಕ್ಕಳಿಗೆ ಬಸವಣ್ಣನವರ ವಚನ ಮತ್ತು ಕತೆಗಳನ್ನು ಹೇಳಬೇಕು. ಅವಾಗ ಮಾತ್ರ ವೈಜ್ಞಾನಿಕವಾಗಿ ಜೀವಿಸಲು ಸಾಧ್ಯ. ಭಾರತದಲ್ಲಿ ಮೊದಲ ಶಿಕ್ಷಕಿ ಸಾವಿತ್ರಿಭಾಯಿ ಪೂಲೆ ಅವರು ಶಿಕ್ಷಣದಿಂದ ವಂಚಿತರಾದ ಹೆಣ್ಣು ಮಕ್ಕಳಿಗೆ ದೇವಾಲಯ, ಗುರುಕುಲ, ಮರದಕೆಳಗೆ ಶಿಕ್ಷಣ ನೀಡುತ್ತಿದ್ದರು ಅವರ ಆದರ್ಶ ತತ್ವಗಳನ್ನು ಇಂದಿಗೂ ಮಹಿಳೆಯರು ಪಾಲಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಹಿರಿಯ ಸಿವಿಲ್ ಜಿಲ್ಲಾ ನ್ಯಾಯಾಧಿಶ ಪರಶುರಾಮ ಎಫ್. ದೊಡ್ಡಮನಿ ಅವರು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಶಿ ಪಾಟೀಲ ಅವರು ಮಾತನಾಡಿ, ಹಳ್ಳಿಗಳಲ್ಲಿ ಬಾಲ್ಯ ವಿವಾಹವು ಹೆಚ್ಚಾಗಿ ಕಂಡು ಬರುತ್ತಿದೆ. ಒಂದು ಸಾವಿರ ಪುರುಷರಿಗೆ 937 ಹೆಣ್ಣು ಮಕ್ಕಳ ಸಂಖ್ಯೆ ಇದೆ, ಹಳ್ಳಿಗಳಲ್ಲಿ, ದೊಡ್ಡ ಆಸ್ಪತ್ರೆಗಳಲ್ಲಿ ಹೆಚ್ಚಾಗಿ ಹೆಣ್ಣು ಭ್ರೂಣ ಹತ್ಯೆ ಕಂಡುಬರುತ್ತಿದೆ. ಹೆಣ್ಣು ಭ್ರೂಣ ಹತ್ಯೆಯ ಬಗ್ಗೆ ಜನರಲ್ಲಿ ಜಾಗೃತಿಯನ್ನು ಮೂಡಿಸಲಾಗುತ್ತಿದೆ. ಹೆಣ್ಣು ಮಕ್ಕಳು ಸಮಾಜದಲ್ಲಿ ಉತ್ತಮವಾದ ಸ್ಥಾನಮಾನವನ್ನು ಹೊಂದಿ, ಗುರುತಿಸಿಕೊಳ್ಳಲು ಅವಕಾಶ ನೀಡಬೇಕು ಎಂದರು.

ಕಾಯ್ರಕ್ರಮದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸ್ವರೂಪ ಟಿ.ಕೆ. ಅಧ್ಯಕ್ಷತೆಯನ್ನು ವಹಿಸಿದ್ದರು, ಹರೀಶ್ ಜೋಗಿ, ನೂರಜಹಾನ ಕಿಲ್ಲೇದಾರ, ತನುಜಾ ಕೆ.ಎನ್ ಅವರು ಉಪಸ್ಥಿತರಿದ್ದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ.ಅವರು ಕಾರ್ಯಕ್ರಮವನ್ನು ನಿರೂಪಿಸಿ, ವಂದಸಿದರು.

# ಬೆಂಗಳೂರು ಸುತ್ತಾಡಿದ ಬ್ರಿಟನ್‌ನ ಪ್ರಥಮ ಮಹಿಳೆ ಅಕ್ಷತಾ ಮೂರ್ತಿ

## ಸರಳತೆಗೆ ವ್ಯಾಪಕ ಮೆಚ್ಚುಗೆ, ಭದ್ರತೆ ಬಗ್ಗೆ ನೆಟ್ಟಿಗರ ಕಳವಳ

ಬೆಂಗಳೂರು: ಬ್ರಿಟನ್ ಪ್ರಧಾನಿ ರಿಷಿ ಸುನಕ್ ಅವರ ಪತ್ನಿ, ಬ್ರಿಟನ್‌ನ ಪ್ರಥಮ ಮಹಿಳೆ ಅಕ್ಷತಾ ಮೂರ್ತಿ ಅವರು ಇತ್ತೀಚೆಗೆ ಬೆಂಗಳೂರಿಗೆ ಭೇಟಿ ನೀಡಿದ್ದು, ಈ ವೇಳೆ ಪುಸ್ಕತ ಮೇಳವೊಂದರಲ್ಲಿ ಸಾಮಾನ್ಯ ಮಹಿಳೆಯಂತೆ ಪುಸ್ತಕಗಳ ಹುಡುಕಾಟ ನಡೆಸಿದ್ದಕ್ಕೆ ವ್ಯಾಪಕ ಮೆಚ್ಚುಗೆಗಳು ವ್ಯಕ್ತವಾಗಿದ್ದವು. ಈ ಕುರಿತ ವಿಡಿಯೋಗಳೂ ಕೂಡ ಸಾಮಾಜಿ-ಕ ಜಾಲತಾಣಗಳಲ್ಲಿ ವೈರಲ್ ಆಗಿದ್ದವು. ಆದರೆ, ಇದರ ಜೊತೆ ಜೊತೆಗೆ ನೆಟ್ಟಿಗರು ಅಕ್ಷತಾ ಅವರ ಭದ್ರತೆ ಬಗ್ಗೆಯೂ ಕಳವಳ ವ್ಯಕ್ತಪಡಿಸುತ್ತಿದ್ದಾರೆ.

ಅಕ್ಷತಾ ಮೂರ್ತಿ ಅವರು ಬ್ರಿಟನ್‌ನ ಪ್ರಥಮ ಮಹಿಳೆಯಾಗಿರುವ ಹಿನ್ನೆಲೆಯಲ್ಲಿ ಅವರ ಭದ್ರತೆ ಕುರಿತು ನೆಟ್ಟಿಗರು ಕಳವಳ ವ್ಯಕ್ತಪಡಿಸಿದ್ದಾರೆ.

ಸರ್ಕಾರ ನಿರ್ದೇಶನ ನೀಡಿದರೆ ಮಾತ್ರವೇ ಭದ್ರತೆ ಬಗ್ಗೆ ವ್ಯವಸ್ಥೆಗಳನ್ನು ಕಲ್ಪಿಸಬಹುದು ಎಂದು ನಗರ ಪೊಲೀಸರು ಹೇಳಿದ್ದಾರೆ.



ಅಕ್ಷತಾ ಅವರು ಬೆಂಗಳೂರಿನ ರಾಘವೇಂದ್ರ ಮಠದ ರಸ್ತೆಯಲ್ಲಿ ಕುಟುಂಬ ಸಮೇತರಾಗಿ ಪುಸ್ತಕ ಮೇಳವೊಂದಕ್ಕೆ ಭೇಟಿ ನೀಡಿದ್ದು, ಪುಸ್ತಕಗಳಿಗಾಗಿ ಹುಡುಕಾಟ ನಡೆಸುತ್ತಿರುವ ವಿಡಿಯೋ ಹಾಗೂ ಜಯನಗರದಲ್ಲಿ ತಂದೆ ನಾರಾಯಣಮೂರ್ತಿಯವರೊಂದಿಗೆ ಫೋಟೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಸೋಮವಾರ ಈ ವಿಡಿಯೋ ಫೋಟೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಲಾಗಿದ್ದು, ಈ ವಿಡಿಯೋ ಹಾಗೂ ಫೋಟೋವನ್ನು ಸಾವಿರಾರು ಜನರು ವೀಕ್ಷಣೆ ಮಾಡಿ, ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಇದರ ಜೊತೆಗೆ ಕೆಲವರು ಭದ್ರತೆ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಅಕ್ಷತಾ ಅವರಿಗೆ ವಿವಿಐಪಿ ವ್ಯವಸ್ಥೆಗಳನ್ನು ಕಲ್ಪಿಸಬೇಕಿತ್ತು ಎಂದು ಹೇಳಿದ್ದಾರೆ.

ಅಕ್ಷತಾ ಅವರಿಗೆ ಭಾರತ ಅಥವಾ ಬ್ರಿಟನ್ ಯಾವ ರಾಷ್ಟ್ರ ಭದ್ರತೆ ಒದಗಿಸುತ್ತದೆ? ಇದು ವೈಯಕ್ತಿಕ ಭೇಟಿಯಾಗಿರುವುದರಿಂದ ಭಾರತ ಭದ್ರತೆ ನೀಡಲು ಸಾಧ್ಯವಿಲ್ಲ. ಇಂತಹ ಭೇಟಿಗೆ ಬ್ರಿಟನ್ ಕೂಡ ಭದ್ರತೆಗೆ ಆದ್ಯತೆ ನೀಡುವುದಿಲ್ಲ ಎಂದು ವ್ಯಕ್ತಿಯೊಬ್ಬರು ಪೋಸ್ಟ್ ಮಾಡಿದ್ದಾರೆ.

ಭದ್ರತೆ ಲೋಪ ಬೇಜವಾಬ್ದಾರಿಯುತವಾದದ್ದು. ಅಕ್ಷತಾ ಅವರಿಗೆ ಏನಾದರೂ ಆಗಿದ್ದರೆ, ಭಾರತೀಯ ರಾಯಭಾರ ಕಚೇರಿ ಹೊಣೆ ಹೊರಬೇಕಾಗುತ್ತದೆ ಎಂದು ಮತ್ತೊಬ್ಬ ವ್ಯಕ್ತಿ ಪೋಸ್ಟ್ ಮಾಡಿದ್ದಾರೆ.

ನಾರಾಯಣ ಮೂರ್ತಿ ಮತ್ತು ಸುಧಾ ಮೂರ್ತಿ ಜೊತೆಗಿಕುವ ಅಕ್ಷತಾ ಮೂರ್ತಿ ಅಕ್ಷತಾ ಮೂರ್ತಿ ಸೇರಿದಂತೆ ವಿಶ್ವದ ಪ್ರಥಮ ಮಹಿಳೆಯರಿಗೆ ಪ್ರಧಾನಿ ಮೋದಿ ನೀಡಿದ ವಿಶಿಷ್ಟ ಬಗೆಯ ಆಕರ್ಷಕ ಗಿಫ್ಟ್-ಭಾವಚಿತ್ರಗಳು ತಂದೆ ಮತ್ತು ಮಗಳ ಜೋಡಿ ಸರಳ ಹಾಗೂ ಸೊಗಸಾಗಿ ಕಾಣುತ್ತಿದೆ. ಆದರೆ, ಸುತ್ತಲೂ ಭದ್ರತೆ ಇದೆಯೇ ಎಂದು ಪ್ರಶ್ನಿಸಿದ್ದಾರೆ.

ಅಕ್ಷತಾ ಅವರು ವೈಯಕ್ತಿಕವಾಗಿ ನಗರಕ್ಕೆ ಭೇಟಿ ನೀಡಿದ್ದು, ಅಧಿಕೃತವಾಗಿ ಭೇಟಿ ನೀಡಿರಲಿಲ್ಲ. ಅಧಿಕೃತ ಭೇಟಿಯಲ್ಲಿದ್ದರೆ ಭದ್ರತೆಯು ವಿಭಿನ್ನವಾಗಿರುತ್ತಿತ್ತು. ಆದಾಗ್ಯೂ, ಭದ್ರತಾ ನಿಯಮಗಳು ಸರ್ಕಾರದ ನಿರ್ದೇಶನಗಳು ಮತ್ತು ಕೇಂದ್ರ ಸಂಸ್ಥೆಗಳ ಮೇಲೆ ಅವಲಂಬಿತವಾಗಿರುತ್ತದೆ ಎಂದು ತಿಳಿಸಿದ್ದಾರೆ.

## ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಮಹಿಳಾ ಕ್ರೀಡಾಕೂಟ

ಶಿವಮೊಗ್ಗ: ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಮಾರ್ಚ-08 ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸುತ್ತಿದ್ದು, ಪ್ರಯುಕ್ತ ಪೂರ್ವಭಾವಿಯಾಗಿ ನಗರದ ನೆಹರೂ ಕ್ರೀಡಾಂಗಣದಲ್ಲಿ ಮಾ. 06 ಮತ್ತು 07 ರಂದು ಜಿಲ್ಲೆಯ ಮಹಿಳೆಯರಿಗಾಗಿ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಿದೆ.

ಮಾ. 06 ಮತ್ತು 07 ರಂದು ಬೆಳಗ್ಗೆ 10.00 ರಿಂದ ವಾಲಿಬಾಲ್, ಥ್ರೋಬಾಲ್, ಅಥ್ಲೇಟಿಕ್ (100 ಮೀ, 800ಮೀ ಓಟ, ಉದ್ದ ಜಿಗಿತ ಮತ್ತು 200 ಮೀ, 100ಮೀ ಗುಂಡು ಎಸೆತ), ಹಗ್ಗಜಗ್ಗಾಟ, ಪಗಡೆ ಕ್ರಿಕೇಟ್, ಬಾಂಬ್ ಇನ್ದಿ ಸಿಟಿ, ಲಗೋರಿ ಹಾಗೂ ಭೌದ್ಧಿಕ ಸ್ಫರ್ದೆಗಳಲ್ಲಿ ರಸಪ್ರಶ್ನೆ ಸ್ಪರ್ಧೆ, ಜಾನಪದ ಗೀತೆ ಮತ್ತು ಗೀಗೀಪದ ಸ್ಪರ್ಧೆಗಳನ್ನು ಆಯೋಜಿಸಿಲಾಗಿದೆ.

ಮಾ. 07 ರಂದು ಬೆಳಗ್ಗೆ 07.00 ರಿಂದ 5 ಕಿ.ಮೀ.ಮ್ಯಾರಾಥಾನ್ ಆಯೋಜಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರೂ ಕ್ರೀಡಾಂಗಣ, ಶಿವಮೊಗ್ಗ, ದೂ.ಸಂ.: 08182-223328 ನ್ನು ಸಂಪರ್ಕಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಅಪರ ಸರ್ಕಾರಿ ವಕೀಲರ ನೇಮಾಕಾತಿಗಾಗಿ ಅರ್ಜಿ ಆಹ್ವಾನ

ಶಿವಮೊಗ್ಗ: ಭದ್ರಾವತಿ ತಾಲೂಕಿನ ಹಿರಿಯ ಶ್ರೇಣಿ ನಾಯಾಲಯಕ್ಕೆ ಪರ ಸರ್ಕಾರಿ ವಕೀಲರ ನೇಮಕ ಮಾಡಲು 07 ವರ್ಷಗಳ ವಕೀಲ ವೃತ್ತಿಯನ್ನು ಪೂರೈಸಿದ ಅನುಭವ ಹೊಂದಿರುವ ಅರ್ಹ ನ್ಯಾಯವಾದಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ತಮ್ಮ ವೈಯುಕ್ತಿಕ ಮಾಹಿತಿಯೊಂದಿಗೆ ಅರ್ಜಿ ಸಿದ್ಧಪಡಿಸಿ ಮಾ. 11ರೊಳಗಾಗಿ ಜಿಲ್ಲಾಧಿಕಾರಿಗಳ ನ್ಯಾಯಾಂಗ ಶಾಖೆಯಲ್ಲಿ ಅರ್ಜಿ ಸಲ್ಲಿಸುವಂತೆ ಶಿವಮೊಗ್ಗ ಜಿಲ್ಲಾ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ನ್ಯಾಯಾಂಗ ಶಾಖೆ ದೂ.ಸಂ.: 08182-221100/221010 ಗಳನ್ನು ಸಂಪರ್ಕಿಸುವುದು.

## ರಸ್ತೆ ಸಂಚಾರ ಸಮೀಕ್ಷೆ

ಧಾರವಾಡ: ಲೋಕೋಪಯೋಗಿ ಇಲಾಖೆಯ ವತಿಯಿಂದ 2023-24 ನೇ ಸಾಲಿನ ರಸ್ತೆ ಸಂಚಾರ ಸಮೀಕ್ಷೆಯನ್ನು ಫೆಬ್ರವರಿ 29, 2024 ರಂದು ಬೆಳೆಗ್ಗೆ 6 ಗಂಟೆಯಿಂದ ಮಾರ್ಚ್ 2, 2024 ರ ಬೆಳಗ್ಗೆ 6.00 ಗಂಟೆಯವರೆಗೆ ಸತತವಾಗಿ ಎರಡು ದಿನಗಳ ಕಾಲ ಲೋಕೋಪಯೋಗಿ ಇಲಾಖೆಯ ಎಲ್ಲ ರಾಜ್ಯ ಹೆದ್ದಾರಿ ಹಾಗೂ ಆಯ್ದ ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಕೈಗೊಳ್ಳಲಾಗಿದೆ.

ಈ ಸಮೀಕ್ಷೆಯಿಂದ ಸಂಗ್ರಹಿಸಲಾಗುವ ರಸ್ತೆಯ ವಾಹನ ಸಾಂದ್ರತೆ, ರಸ್ತೆಯ ಉಪಯೋಗಿಸುವ ಸವಾರರ ಸಂಖ್ಯೆ ರಸ್ತೆಯ ಸಂಚಾರ ತೀವ್ರತೆಯಂತಹ ಉಪಯುಕ್ತ ಮಾಹಿತಿಯಿಂದ ಮುಂಬರುವ ದಿನಮಾನಗಳಲ್ಲಿ ಕೈಗೊಳ್ಳಲಾಗುವ ರಸ್ತೆಯ ಅಗಲೀಕರಣ, ರಸ್ತೆಗಳನ್ನು ಮೇಲ್ದರ್ಜೆಗೇರಿಸುವಂತಹ ಅಭಿವೃದ್ಧಿ ಯೋಜನೆಗಳ ಮುಖಾಂತರ ರಸ್ತೆಗಳನ್ನು ಉತ್ತಮ ಸಂಚಾರಕ್ಕೆ ಅನುವು ಮಾಡಿ ಕೊಡಲು ಅನಕೂಲಕರವಾಗಿರುತ್ತವೆ.

ಈ ಸಂಚಾರ ಗಣತಿಯು ಸತತ ಎರಡು ದಿನಗಳ ಕಾಲ ನಡೆಯಲಿದ್ದು ಗಣತಿ ಕಾರ್ಯ ನಡೆಯುವ ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಬದಿಯಲ್ಲಿ ತಾತ್ಕಾಲಿಕವಾಗಿ ನಿರ್ಮಿಸಲಾದ ಸಮೀಕ್ಷಾ ಕೇಂದ್ರಗಳ ಸಿಬ್ಬಂದಿಗಳಿಗೆ ರಸ್ತೆಯ ಮೇಲೆ ಸಂಚರಿಸುವ ಎಲ್ಲ ವಾಹನ ಚಾಲಕರು ನಿಧಾನವಾಗಿ ವಾಹನ ಚಲಾಯಿಸುವ ಮೂಲಕ ಸಾರ್ವಜನಿಕರು ಸಹಕಾರ ನೀಡಬೇಕೆಂದು ಧಾರವಾಡ ವೃತ್ತ ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಹನ ಸಂಚಾರ ಗಣತಿ; ಸಹಕರಿಸಲು ಮನವಿ

ಶಿವಮೊಗ್ಗ: ಲೋಕೋಪಯೋಗಿ ಇಲಾಖೆಯು 2024ನೇ ಸಾಲಿನ ವಾಹನ ಸಂಚಾರ ಗಣತಿಯನ್ನು ಫೆ. 29 ರಿಂದ ಮಾ. 2ರವರೆಗೆ ಹಮ್ಮಿಕೊಂಡಿದ್ದು, ಈ ಕಾರ್ಯವನ್ನು ಸುಗಮವಾಗಿ ನಡೆಸಲು ವಾಹನ ಚಾಲಕರು ಹಾಗೂ ಸಾರ್ವಜನಿಕರು ವಾಹನಗಳನ್ನು ನಿಧಾನವಾಗಿ ಚಲಾಯಿಸಿ ಸಹಕಾರ ನೀಡುವಂತೆ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಪ್ರಕಟಣೆಯಲ್ಲಿ ಕೋರಿರುತ್ತಾರೆ.

# ಡ್ರಗ್ಸ್ ದಂಧೆ: ನೇತ್ರ ತಜ್ಞ ಸೇರಿ ನಾಲ್ವರ ಬಂಧನ; 2.35 ಕೋಟಿ ರೂ. ಮೌಲ್ಯದ ಡ್ರಗ್ಸ್ ವಶಕ್ಕೆ

ಬೆಂಗಳೂರು: ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಡ್ರಗ್ಸ್ ಮಾಫಿಯಾ ವಿರುದ್ಧ ಮತ್ತೆ ಭರ್ಜರಿ ಕಾರ್ಯಾಚರಣೆ ನಡೆಸಿರುವ ಸಿಸಿಬಿ, ನೇತ್ರ ತಜ್ಞ ಸೇರಿ ನಾಲ್ವರು ಆರೋಪಿಗಳನ್ನು ಬಂಧಿಸಿ ರೂ.2.35 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ ಮಾಡಿದೆ.

ನೈಜೀರಿಯಾ ದೇಶದ ಕಾಲು ಚುಕ್ವಾ, ಚೈನಾಸಸ್ಯೆಪ್ರಿಲಾನ್ ಒಕೊಯಿ, ಗಾನದ ಇಮ್ಮಾನುಲ್ ಕ್ವಾಸಿ ಹಾಗೂ ಆರ್'ಎಂಸಿಯಾರ್ಡ್ ಸಮೀಪದ ನಿವಾಸಿ ಡಾ.ನಿಖಿಲ್ ಬಂಧಿತ ಆರೋಪಿಗಳು.

ಆರೋಪಿಗಳಿಂದ 730 ಗ್ರಾಂ ಎಡಿ-ಎಂಎ ಕ್ರಿಸ್ಟೆಲ್, 1273 ಎಕ್ಸೈಟೆಸಿ ಮಾತ್ರೆಗಳು, 42 ಗ್ರಾಂ ಹೈಡ್ರೋ ಗಾಂಜಾ ಹಾಗೂ ನಾಲ್ಕು ಮೊಬೈಲ್ ಗಳು ಸೇ-ರಿದಂತೆ 2.35 ಕೋಟಿ ರೂ ಮೌಲ್ಯದ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ.

ಖಚಿತ ಮಾಹಿತಿ ಮೇರೆಗೆ ಸೋಲದೇವನಹಳ್ಳಿ ಹಾಗೂ ಆರ್'ಎಂಸಿ ಯಾರ್ಡ್ ಠಾಣಾ ವ್ಯಾಪ್ತಿಯಲ್ಲಿ ಪ್ರತ್ಯೇಕವಾಗಿ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಸಿಸಿಬಿ ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.




ಕೆಲ ತಿಂಗಳ ಹಿಂದೆ ಪ್ರವಾಸ ವೀಸಾದಡಿ ಭಾರತಕ್ಕೆ ಬಂದಿರುವ ನೈಜೀರಿಯಾದ ಚುಕ್ವಾ ಹಾಗೂ ಒಕೊಯಿ ಹಣದಾಸೆಗೆ ಡ್ರಗ್ ದಂಧೆಗಿಳಿದಿದ್ದು. ಅಂತರಾಷ್ಟ್ರೀಯ ಡ್ರಗ್ಸ ಮಾರಾಟ ಸಂಪರ್ಕ ಜಾಲದ ಮೂಲಕ ಡ್ರಗ್ಸ್ ಖರೀದಿಸಿ ಭಾರತದಲ್ಲಿ ಆರೋಪಿಗಳು ಮಾರಾಟ ಮಾಡುತ್ತಿದ್ದರು. ಈ ಪೆಡ್ಲರ್ ಗಳ ಪೈಕಿ ಒಕೊಯಿಯನ್ನು ಮುಂಬೈ ಪೊಲೀಸರು ಬಂಧಿಸಿ ಜೈಲಿಗೆ ಕಳುಹಿಸಿದ್ದರು. ನಂತರ ಬೆಂಗಳೂ-ರಿಗೆ ಬಂದು ಸೋಲದೇವನಹಳ್ಳಿ ಬಳಿ ನೆಲೆಸಿದ್ದ ಈತ, ತನ್ನ ದೇಶದ ಚುಕ್ವಾ ಜೊತೆ ಸೇರಿಕೊಂಡು ಡ್ರಗ್ಸ್ ದಂಧೆಯನ್ನು ಮುಂದುವರೆಸಿದ್ದ. ಈ ಇಬ್ಬರ ಬಗ್ಗೆ ಖಚಿತ ಮಾಹಿತಿ ಪಡೆದು ಸಿಸಿಬಿ ಅಧಿಕಾರಿಗಳು ದಾಳಿ ನಡೆಸಿ, ಬಂಧಿಸಿದ್ದಾರೆ.

ಆರೋಪಿಗಳಿಂದ 51 ಲ್ಷ ಮೌಲ್ಯದ 500 ಗ್ರಾಂ ಎಡಿಎಂಎ ಕ್ರಿಸ್ಟೆಲ್ ಹಾಗೂ 2 ಮೊಬೈಲ್ ಗಳನ್ನು ಜಪ್ತಿ ಮಾಡಿದ್ದಾರೆ. ಮತ್ತೊಂದು ಪ್ರಕರಣದಲ್ಲಿ ಸೋಲದೇವನಹಳ್ಳಿ ಬಳಿ ಮತ್ತೊಬ್ಬ ಘಾನ ದೇಶದ ಪೆಡ್ಲರ್ ಇಮ್ಯಾನ್ಯುಲ್ ಸಿಸಿಬಿ ಬಲೆಗೆ ಬಿದ್ದಿದ್ದಾನೆ. 2 ವರ್ಷಗಳ ಹಿಂದೆ ವ್ಯಾಪಾರಿ ವೀಸಾ ಪಡೆದು ಭಾರತಕ್ಕೆ ಬಂದಿದ್ದ ಈತ, ಸುಲಭವಾಗಿ ಹಣ ಗಳಿಸಲು ಡ್ರಗ್ಸ್ ದಂಧೆಗೆ ಇಳಿದಿದ್ದ. ಸ್ಥಳೀಯ ಹಾಗೂ ವಿದೇಶಿ ಪೆಡ್ಲರ್ ಗಳಿಂದ ಕಡಿಮೆ ಬೆಲೆಗೆ ಡ್ರಗ್ಸ್ ಖರೀದಿ ಮಾಡಿ, ದುಬಾರಿ ಬೆಲೆಗೆ ಮಾರಾಟ ಮಾಡುತ್ತಿದ್ದ. ಈತನ ಬಗ್ಗೆ ಮಾಹಿತಿ ಪಡೆದ ಸಿಸಿಬಿ, ದಾಳಿ ನಡೆಸಿ ಬಂಧನಕ್ಕೊಳಪಡಿಸಿದೆ. ಈತನಿಂದ 2356 ಎಂಡಿಎಂಎ ಕ್ರಿಸ್ಟೆಲ್, 1273 ಎಕ್ಸೈಟೆಸಿ ಮಾತ್ರೆಗಳು ಸೇರಿದಂತೆ 1.81 ಕೋಟಿ ಮೌಲ್ಯದ ಡ್ರಗ್ಸ್ ನ್ನು ಜಪ್ತಿ ಮಾಡಿದೆ.

ಅಕ್ರಮವಾಗಿ ಹುಕ್ಕಾ ಬಾರ್ ನಡೆಸುತ್ತಿದ್ದ ಏಳು ಮಂದಿಯನ್ನು ಕೇಂದ್ರ ಅಪರಾಧ ವಿಭಾಗದ (ಸಿಸಿಬಿ) ಮಾದಕ ದ್ರವ್ಯ ನಿಗ್ರಹ ದಳದ ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.

ಮಹಾಲಕ್ಷ್ಮಿ ಲೇಔಟ್, ಎಚ್‌ಎಎಲ್ ಮತ್ತು ಕೆಆರ್ ಪುರಂ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಳಿ ನಡೆಸಲಾಗಿದೆ.

ಹುಕ್ಕಾ ಫ್ಲೇವರ್‌ಗಳು, ಹುಕ್ಕಾ ಪಾಟ್ಸ್ ಮತ್ತು ಪೈಪ್‌ಗಳು, ಲೋಟಗಳು ಸೇ-ರಿದಂತೆ 12.5 ಲಕ್ಷ ಮೌಲ್ಯದ ಹುಕ್ಕಾ ಸಾಮಗ್ರಿಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

# ಪಾಕ್ ಜಿಂದಾಬಾದ್ ಎಂದಿದ್ದು ಯಾರೇ ಆಗಲಿ ಬಿಡೋ ಮಾತೇ ಇಲ್ಲ: ಗೃಹ ಸಚಿವ ಪರಮೇಶ್ವರ್

ಬೆಂಗಳೂರು: ಕಾಂಗ್ರೆಸ್ ಸಂಭ್ರಮಾಚರಣೆ ವೇಳೆ ವಿಧಾನಸೌಧ ಆವರಣದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಲಾಗಿದೆ ಎನ್ನಲಾದ ವಿವಾದ ರಾಜ-ಕೀಯ ತಿರುವು ಪಡೆದುಕೊಂಡಿದೆ. ಈ ಬಗ್ಗೆ ಸದ್ಯ ನಡೆಯುತ್ತಿರೋ ರಾಜ್ಯ ಬಜೆಟ್ ಅಧಿವೇಶನದಲ್ಲೂ ಭಾರೀ ಚರ್ಚೆ ಆಗುತ್ತಿದೆ. ವಿಪಕ್ಷ ನಾಯಕ ಆರ್. ಅಶೋಕ್ ಕೇಳಿದ ಪ್ರಶ್ನೆಗೆ ರಾಜ್ಯ ಗೃಹ ಸಚಿವ ಡಾ. ಪರಮೇಶ್ವರ್ ಸೂಕ್ಷ್ಮ ಉತ್ತರ ನೀಡಿದ್ದಾರೆ.

ಇದೊಂದು ಗಂಭೀರವಾದ ವಿಚಾರ. ರಾಜ-ಕೀಯ ಚರ್ಚೆ ಮಾಡಲಿಕ್ಕೆ ಈ ರೀತಿ ವಿಚಾರಗಳನ್ನು ಬಳಸಿಕೊಳ್ಳುತ್ತಿದ್ದೇವೆ ಅನಿಸುತ್ತಿದೆ. ನಾನು ಎಲ್ಲರಿಗೂ ಕೇಳಿಕೊಳ್ಳುವುದು ಏನೆಂದರೆ ಈ ರೀತಿ ವಿಚಾರಗಳ ಬಗ್ಗೆ ಚರ್ಚೆ ಮಾಡುವಾಗ ನೈಜ ಸ್ಥಿತಿಗಳನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

ನಾವು ದೇಶ ಪ್ರೇಮದ ಬಗ್ಗೆ ಮಾತಾಡ್ತಾ ಇದೀವಿ. ಕಾಂಗ್ರೆಸ್ಸಿಗೆ ದೇಶ ಪ್ರೇಮದ ಪಾಠ ಹೇಳಿಕೊಡಬೇಕು ಅನ್ನೋ ಮಾತುಗಳು ಕೇಳಿ ಬಂದಿವೆ. ಈ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟಿದ್ದೇ ಕಾಂಗ್ರೆಸ್. ಎಷ್ಟು ಜನರನ್ನು ತ್ಯಾಗ ಮಾಡಿದೆ ಎಂದು ತಿಳಿದುಕೊಳ್ಳಬೇಕು. ಆಗ ದೇಶ ಪ್ರೇಮ ಕಾಂಗ್ರೆಸ್ಸಿಗೆ ಇರಲಿಲ್ವಾ? ನಾವು ಅದನ್ನು ಮರೆತಿಲ್ಲ ಎಂದರು.

ಕಾಂಗ್ರೆಸ್ ಬದ್ಧತೆ ಯಾವತ್ತೂ ಬದಲಾಗಿಲ್ಲ. ದೇಶ ಪ್ರೇಮ ಅನ್ನೋದು ಕಾಂಗ್ರೆಸ್ ರಕ್ತದಲ್ಲೇ ಇದೆ. ಹಾಗಾಗಿ ಕಾಂಗ್ರೆಸ್ಸಿಗೆ ಯಾರು ದೇಶ ಪ್ರೇಮ ಪಾಠ ಹೇಳಿ ಕೊಡೋ ಅಗತ್ಯ ಇಲ್ಲ. ಕಾಂಗ್ರೆಸ್ ಪಾಕ್ ಪರ ಘೋಷಣೆ ಕೂಗುವ ಕಿಡಿಗೇಡಿಗಳಿಗೆ ಬೆಂಬಲ ನೀಡುತ್ತೇ ಎಂಬ ಆರೋಪ ಮಾಡಿದ್ದೀರಿ. 1972ರಲ್ಲಿ ಪಾಕ್ ಮೇಲೆ ಯುದ್ಧ ಮಾಡಿದ್ದೇ ಕಾಂಗ್ರೆಸ್. ನಾವು ಅಂದು ಪಾಕಿಸ್ತಾನವನ್ನೇ ಮುಗಿಸಿಬಿಡುತ್ತಿದ್ದೆವು ಎಂದರು.

ಈ ಘಟನೆ ಆಗಬಾರದಾಗಿತ್ತು. ಮಾಧ್ಯಮದವೇ ಘಟನೆ ಬಗ್ಗೆ ಎರಡು ಅಭಿಪ್ರಾಯಗಳು ಹೇಳಿದ್ದಾರೆ.




ಕೆಲವು ಮಾಧ್ಯಮದವರು, ಹೌದು ಪಾಕಿಸ್ತಾನ ಪರ ಘೋಷಣೆ ಕೂಗಿದ್ದಾರೆ ಎಂದು ಕ್ಲೋಸಪ್ನಲ್ಲಿ ತೋ-ರಿಸಿದ್ದಾರೆ.

ಇನ್ನು, ಕೆಲವರು ಅಲ್ಲೇ ನಾನು ಪಕ್ಕದಲ್ಲೇ ಇದ್ದೆ, ಆ ರೀತಿ ಏನು ಹೇಳೇ ಇಲ್ಲ ಎಂದು. ನಾವು ಅಂತೂ ಕೂಡಲೇ ಕೇಸ್ ಮಾಡಿದೀವಿ. ಯಾರನ್ನು ಪೊಲೀಸ್ರು ಒಳಗೆ ಬರಬಾರದಿತ್ತು. ಶಾಸಕರ ಜೊತೆ ಬೆಂಬಲಿಗರನ್ನು ಬಿಟ್ಟಿದ್ದೇ ಈ ಘಟನೆಗೆ ಕಾರಣ ಎಂದರು.

ನಾಸೀರ್ ಹುಸೇನ್ 25 ಮಂದಿಗೆ ಪರ್ಮಿಷನ್ ತಗೊಂಡಿದ್ರು. ಸೆಲೆಬ್ರೇಷನ್ ವೇಳೆ ಕೂಗಿದಿದ್ರೆ ಅದು ಸೈಂಟಿಫಿಕ್‌ಆಗಿ ತಿಳಿದುಕೊಳ್ಳಬೇಕು ಅಲ್ಲವೇ! ಒಂದು ವೇಳೆ ಯಾರಾದ್ರೂ ಪಾಕ್ ಪರ ಘೋಷಣೆ ಕೂಗಿದ್ರೆ ನಾವು ಯಾವುದೇ ಕಾರಣಕ್ಕೂ ಬಿಡಲ್ಲ. ಕಾನೂನಲ್ಲಿ ಏನಿದೆ ಅದೇ ಶಿಕ್ಷೆ ಕೊಡ್ತೀವಿ. ಆರೋಪಿ ಯಾರೇ ಆಗಿರಲಿ ಬಿಡೋ ಮಾತೇ ಇಲ್ಲ. ಪಾಕಿಸ್ತಾನ ಜಿಂದಾಬಾದ್ ಎಂದು ಹೇಳಿರೋದು ಈಖಐ ರಿಪೋರ್ಟ್‌ನಲ್ಲಿ ಬಂದ್ರೆ ಒಂದು ಕ್ಷಣ ಬಿಡೋದಿಲ್ಲ. ಯಾರನ್ನು ರಕ್ಷಣೆ ಮಾಡೋ ಅಗತ್ಯ ಇಲ್ಲ. ಅವನು ಯಾರೇ ಇರಬಹುದು, ನಾವು ಕಾನೂನಿನ ಪ್ರಕಾರ ಶಿಕ್ಷೆ ನೀಡುತ್ತೇವೆ ಎಂದರು.

## ಐಎಎಸ್ ಅಧಿಕಾರಿ ಶಿವರಾಮ್ ಆರೋಗ್ಯ ಸ್ಥಿತಿ ಗಂಭೀರ




ಬೆಂಗಳೂರು: ಕನ್ನಡದಲ್ಲಿ ಐಎಎಸ್ ಮಾಡಿದ ಮೊದಲ ಅಧಿಕಾರಿ ಹಾಗೂ ಬಾ ನಲ್ಲೆ, ಮಧುಚಂದ್ರಕೆ ಸೇರಿದಂತೆ ಅನೇಕ ಸಿನಿಮಾಗಳಲ್ಲಿ ನಾಯಕರಾಗಿ ನಟಿಸಿರುವ ಕೆ. ಶಿವರಾಮ್ ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎನ್ನುವ ಮಾಹಿತಿ ಇದೆ. ಅನಾರೋಗ್ಯದಿಂದಾಗಿ ಅವರನ್ನು ಖಾಸಗಿ ಆಸ್ಪತ್ರೆಗೆ ಸೇರಿಸಲಾಗಿದೆ. ಹಲವು ದಿನಗಳಿಂದ ಅವರು ಚಿಕಿತ್ಸೆ ಪಡೆಯುತ್ತಿದ್ದರು.

ಮೂಲಗಳ ಪ್ರಕಾರ ಎಚ್.ಸಿ.ಜಿ ಆಸ್ಪತ್ರೆಯಲ್ಲಿ ಅವರಿಗೆ ಚಿಕಿತ್ಸೆ ನೀಡಲಾಗುತ್ತಿದ್ದು, ಪರಿಸ್ಥಿತಿ ಚಿಂತಾಜನಕವಾಗಿದ್ದು, ಐಸಿಯುವಿನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಮಾಹಿತಿ ಸಿಗುತ್ತಿದೆ. ಕನ್ನಡದಲ್ಲೇ ಐಎಎಸ್ ಬರೆದು, ನಂತರ ಬೆಂಗಳೂರು, ವಿಜಯಪುರ, ಕೊಪ್ಪಳ ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ಅವರು ಕೆಲಸ ಮಾಡಿದ್ದಾರೆ.

ನಂತರ ಬಾ ನಲ್ಲೆ ಮಧುಚಂದ್ರಿಕೆ, ವಸಂತ ಕಾವ್ಯದಂತಹ ಚಿತ್ರಗಳಲ್ಲಿ ನಾಯಕರಾಗಿ ನಟಿಸಿದ್ದಾರೆ. ಸಾಂಗ್ಲಿಯಾನ 3 ಚಿತ್ರದಲ್ಲಿ ಇವರದ್ದು ಖಳನಾಯಕನ ಪಾತ್ರ. ಹತ್ತಕ್ಕೂ ಹೆಚ್ಚು ಸಿನಿಮಾಗಳಲ್ಲಿ ನಟಿಸಿರುವ ಶಿವರಾಮ್, ತಮ್ಮ ಮಗಳನ್ನು ನಟ ಪ್ರದೀಪ್ ಅವರಿಗೆ ಧಾರೆಯರೆದಿದ್ದರು. ಕೆಲವು ತಿಂಗಳಿಂದ ಅವರು ಅನಾರೋಗ್ಯದಿಂದ ಬಳಲುತ್ತಿದ್ದಾರೆ ಎಂದು ಅವರು ಆಪ್ತರು ತಿಳಿಸಿದ್ದಾರೆ.

# 5-6 ಮಹಿಳೆಯರ ಮೇಲೆ ಪಾದ್ರಿ ಲೈಂಗಿಕ ದೌರ್ಜನ್ಯ: ಮಗಳಿಂದಲೇ ಗಂಭೀರ ಆರೋಪ

ದಾವಣಗೆರೆ: ಜಯನಗರದ ಚರ್ಚ್ ಪಾದ್ರಿ ರಾಜಶೇಖರ ಎಂಬುವವರ ವಿರುದ್ಧ ಲೈಂಗಿಕ ದೌರ್ಜನ್ಯದ ಗಂಭೀರ ಆರೋಪ ಕೇಳಿ ಬಂದಿದೆ. ಚರ್ಚ್‌ನಲ್ಲಿ ಪಾದ್ರಿಯಿಂದ ಅನೇಕ ಮಹಿಳೆಯರಿಗೆ ಲೈಂಗಿಕ ದೌರ್ಜನ್ಯ ನಡೆದಿದೆ. ತನ್ನ 57ನೇ ವಯಸ್ಸಿನಲ್ಲೂ ಎರಡನೇ ಮದುವೆ ಆಗುತ್ತಿದ್ದಾರೆ ಎಂದು ಆತನ ಮಗಳು ಡೈಸಿ ಪ್ರಿಯಾಂಕ ಆರೋಪಿಸಿದ್ದಾರೆ.



ಆರೋಪಿ ರಾಜಶೇಖರ್ ಎಂಬುವವರು ಜಯನಗರದ ಡಿಎಚ್‌ಎಂ ಚರ್ಚ್‌ನ ಸಂಸ್ಥಾಪಕರು. ಇವರು 30 ವರ್ಷಕ್ಕೂ ಹೆಚ್ಚು ಕಾಲ ಇದೇ ಚರ್ಚ್‌ನಲ್ಲಿ ಪಾದ್ರಿಯಾಗಿ ಕಾರ್ಯನಿರ್ವಹಿಸಿಕೊಂಡು ಬಂದಿದ್ದಾರೆ. ಚರ್ಚ್‌ಗೆ ಬರುತ್ತಿದ್ದ 5-6 ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ನಡೆದಿದೆ. ಸಾಕಷ್ಟು ಮಹಿಳೆಯರು ಈ ಬಗ್ಗೆ ನನ್ನ ಬಳಿ ಹೇಳಿಕೊಂಡಿದ್ದಾರೆ. ಇಂತಹ ದೌರ್ಜನ್ಯ ಸಹಿಸೋಕೆ ಆಗಲ್ಲ.

ಇದನ್ನ ತೀವ್ರವಾಗಿ ಖಂಡಿಸಬೇಕು ಅಂತ ನಾನು ಈಗ ಮಾಧ್ಯಮದ ಮುಂದೆ ಬಂದಿದ್ದೇನೆ ಎಂದು ಪಾದ್ರಿಯ ಮೊದಲ ಹೆಂಡತಿಯ ಮಗಳು ಡೈಸಿ ಪ್ರಿಯಾಂಕ ಹೇಳಿದ್ದಾರೆ.

ಹೀಗಾಗಿ ತಂದೆಯ ದೌರ್ಜನ್ಯದ ವಿರುದ್ಧ ಮಹಿಳಾ ಪೊಲೀಸ್ ಠಾಣೆಗೆ ದೂರು ನೀಡುವುದಾಗಿ ಮಗಳು ಡೈಸಿ ಪ್ರಿಯಾಂಕ ಆರೋಪ ಮಾಡಿದ್ದಾರೆ.

## ಪೊಲೀಸ್ ಅಧಿಕಾರಿಗೆ ಚಾಕು ಇರಿದ ಕಿಡಿಗೇಡಿಗಳು



ಮಂಡ್ಯ: ಮದ್ದೂರು ಪಟ್ಟಣದ ರೈಲ್ವೆ ನಿಲ್ದಾಣದಲ್ಲಿ ರೈಲ್ವೆ ಪೊಲೀಸ್ ಪೇದೆಗೆ ಚಾಕು ಇರಿಯಲಾಗಿದ್ದು, ಗಂಭೀರಗೊಂಡಿರುವ ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಮೈಸೂರಿನಿಂದ ಬೆಂಗಳೂರಿಗೆ ತೆರಳುತ್ತಿದ್ದ ಗೋಲ್ ಗುಂಬಜ್ ಎಕ್ಸ್‌ಪ್ರೆಸ್ ರೈಲಿನಲ್ಲಿ ಘಟನೆ ನಡೆದಿದೆ.

ಸತೀಶ್ ಚಂದ್ರ ಚಾಕು ಇರಿತಕ್ಕೆ ಒಳಗಾದ ರೈಲ್ವೆ ಪೊಲೀಸ್ ಪೇದೆ. ಗಾಂಜಾ ಮತ್ತಿನಲ್ಲಿ ದುಷ್ಕರ್ಮಿಗಳಿಂದ ದುಷ್ಕೃತ್ಯ ನಡೆದಿದೆ. ಮಂಡ್ಯ ರೈಲ್ವೇ ಔಟ್ ಪೊಲೀಸ್ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಸತೀಶ್ ಚಂದ್ರ, ಕರ್ತವ್ಯಕ್ಕಾಗಿ ಮದ್ದೂರು ಕಡೆಗೆ ಪ್ರಯಾಣ ಮಾಡ್ತಿದ್ದರು. ರೈಲಿನಲ್ಲಿ ಗಾಂಜಾ ಮಿಶ್ರಿತ ಸಿಗರೇಟ್ ಸೇವನೆ ಮಾಡುತ್ತಿದ್ದ ಯುವಕರಿಗೆ ಆಕ್ಷೇಪಣೆ ಮಾಡಿದ್ದರು.

ಬೆಳಗಾವಿ ವರದಿ
THURSDAY, 29 FEBRUARY 2024

# ವಿಚಾರ ಕ್ರಾಂತಿದಿಂದ ವೈಚಾರಿಕ ಕಾಂತ್ರಿ ಬೆಳೆಸಿ: ಸಚಿವ ಸತೀಶ್ ಜಾರಕಿಹೊಳಿ

## ಯಾವುದೇ ಪ್ರಚಾರ ಬಯಸದೇ ಕಾರ್ಯ ನಿರ್ವಹಿಸುವುದು ನಮ್ಮ ಆದ್ಯತೆ

ಬೆಂಗಳೂರು: ವಿಚಾರ ಕ್ರಾಂತಿ ಮೂಲಕ ವೇಗವಾಗಿ ವೈಚಾರಿಕ ಕಾಂತ್ರಿ ಬೆಳೆಸುವ ಕಾರ್ಯವಾಗಲಿ, ನಿಮ್ಮ ಜತೆ ಹಿಂದೆಯೂ ಇದ್ದೆ, ಇಂದು ಇರುತ್ತೇನೆ, ಮುಂದೆಯೂ ಸಾಗುತ್ತೇನೆ ಎಂದ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.




ನಗರದ ಗಾಂಧಿ ಭವನದಲ್ಲಿ ಭಾರತೀಯ ವಿಚಾರವಾದಿ ಸಂಘಗಳ ಒಕ್ಕೂಟ, ಮಾನವ ಬಂಧುತ್ವ ವೇದಿಕೆ, ನೇಗಿಲಯೋಗಿ ಟ್ರಸ್ಟ್, ಅಖಿಲ ಕರ್ನಾಟಕ ವಿಚಾರವಾದಿಗಳ ಟ್ರಸ್ಟ್ ವತಿಯಿಂದ ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ಹಮ್ಮಿಕೊಂಡಿದ್ದ "ವಿಚಾರ ಕ್ರಾಂತಿ" ಒಂದು ದಿನದ ರಾಜ್ಯ ಮಟ್ಟದ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜ ಸುಧಾರಕಿ, ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಸೇರಿದಂತೆ ಮಹಾತ್ಮರ ಚರಿತ್ರೆ ಯುವಕರಿಗೆ ತಿಳಿಸಿ ಎಂದು ಸಲಹೆ ನೀಡಿದರು.

ಮಾನವ ಬಂಧುತ್ವ ವೇದಿಕೆ ರಾಜ್ಯಾದ್ಯಂತ ಹೊರಹೊಮ್ಮಿದ್ದು, ಪ್ರತಿ ತಾಲೂಕು ಘಟಕಗಳಲ್ಲಿಯೂ ಯಾವುದೇ ರೀತಿಯ ಪ್ರಚಾರ ಬಯಸದೇ ಕಾರ್ಯ ನಿರ್ವಹಿಸುತ್ತಿದ್ದು, ಜಾತ್ಯಾತೀತವಾಗಿ ಸಂಘಟನೆಯನ್ನು ಕಟ್ಟುತ್ತಿದ್ದೇವೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಮಾನವ ಬಂಧುತ್ವ ವೇದಿಕೆ ಮೂಲಕ ಮೂಢ ನಂಬಿಕೆಯ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸುವ ಹಲವು ಕಾರ್ಯಕ್ರಮ ಹಮ್ಮಿಕೊಳ್ಳುವುದರ ಮೂಲಕ ಯುವಕರನ್ನು ಜಾಗೃತಿಗೊಳಿಸುತ್ತಿದ್ದೇವೆ. ನಮ್ಮ ಮೊದಲ ಆದ್ಯತೆ ಶಿಕ್ಷಣಕ್ಕೆ ನೀಡಬೇಕು. ಅಂದಾಗ ಮಾತ್ರ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯವಿದೆ. ದೇವರಲ್ಲಿನ ನಂಬಿಕೆ ಮೂಢನಂಬಿಕೆ ಅಲ್ಲ. ಆದರೆ, ದೇವರ ಹೆಸರಿನಲ್ಲಿ ಬಲಿ ಕೊಡುವುದು, ವಾಮಾಚಾರ, ಮಾಟ ಮಂತ್ರ ನಡೆಸುವುದು ಅಮಾನವೀಯ ಆಚ-'ರಣೆಯಾಗಿದೆ. ಇದನ್ನು ತಡೆಯಬೇಕು ಎಂದರು.

ಯುವಕರು ಸರಿಯಾದ ದಾರಿಯಲ್ಲಿ ಸಾಗಬೇಕೆಂದರೆ, ಅವರಿಗೆ ಒಳ್ಳೆಯ ಶಿಕ್ಷಣ ನೀಡಿ ತರಬೇತಿ ಕೊಡಬೇಕು. ಬೆಳಗಾವಿ ಜಿಲ್ಲೆ ಸೇರಿದಂತೆ ಅನೇಕ ಜಿಲ್ಲೆಗಳಲ್ಲಿ ಸತೀಶ್ ಜಾರಕಿಹೊಳಿ ಫೌಂಡೇಶನ್ ಮೂಲಕ ಯುವಕರಿಗೆ ಆರ್ಮಿ, ಪೊಲೀಸ್, ಕೆಎಎಸ್, ಐಎಎಸ್, ಪಿಎಸ್ಐ ಸೇರಿ ಕೌಶಲ್ಯಾಧಾರಿತ ತರಬೇತಿ ನೀಡುತ್ತಿದ್ದು, ಹಲವು ವಿದ್ಯಾರ್ಥಿಗಳಿಗೆ ತಮ್ಮ ಜೀವನ ಕಟ್ಟಿಕೊಳ್ಳಲು ಅವಕಾಶ ಕಲ್ಪಿಸುತ್ತಿದ್ದೇವೆಂದು ತಿಳಿಸಿದರು.

ಹಿರಿಯ ಸಾಹಿತಿ ನಾಡೋಜ ಬರಗೂರು ರಾಮಚಂದ್ರಪ್ಪ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಸಾಹಿತಿ ಅಗ್ರಹಾರ ಕೃಷ್ಣಮೂರ್ತಿ, ವಿಚಾರವಾದಿಗಳಾದ ಪ್ರೊ. ನರೇಂದ್ರ ನಾಯಕ್, ಪ್ರಬಂಧ ಮಂಡನೆಕಾರ ಆರಡಿ ಮಲ್ಲಯ್ಯ ಕಟ್ಟೇರ, ಡಾ. ಪ್ರದೀಪ್ ಮಾಲ್ಗುಡಿ, ಡಾ. ಸವಿತಾ ಶಿವರಾಯ ಶೇಟೆ, ವಕೀಲರಾದ ಅನಂತ್ ನಾಯಕ್, ಆಯೋಜಕರಾದ ಡಾ. ಸ್ವಾಮಿ, ಎಚ್. ಆರ್., ಶ್ರೀನಿವಾಸ್ ನಟೇಕರ್, ನಾಗೇಶ್ ಅರಳಕುಪ್ಪೆ ಸೇರಿದಂತೆ ಅನೇಕರು ಇದ್ದರು.

# ಸಂವಿಧಾನ ಕುರಿತು ವಿಶೇಷ ಉಪನ್ಯಾಸ



ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮತ್ತು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಇವರ ಆಶ್ರಯದಲ್ಲಿ ಇಂಡೋ-ಅಮೆರಿಕನ್ ಡಿಗ್ರೀ ಕಾಲೇಜ್ನಲ್ಲಿ "ಸಂವಿಧಾನ ಜಾಗೃತಿ ಜಾಥಾ" ಅಂಗವಾಗಿ ಸಂವಿಧಾನ ಕುರಿತು ವಿಶೇಷ ಉಪನ್ಯಾಸ ಹಮ್ಮಿಕೊಳ್ಳಲಾಗಿತ್ತು. ಇಂಡೋ ಅಮೇರಿಕನ್ ಡಿಗ್ರಿ ಕಾಲೇಜು ಪ್ರಾಚಾರ್ಯರಾದ ಶೇಖ್ ಸಲೀಮ್ ಬಾಷಾ ಅವರು ಅಂಬೇಡ್ಕರವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಕಾರ್ಯಕ್ರಮ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಪ್ರತಿಯೊಬ್ಬರೂ ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಅರಿತುಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಇದೇ ಸಂದರ್ಭದಲ್ಲಿ ಸಂವಿಧಾನದ ಪ್ರಸ್ತಾವನೆಯನ್ನು ಬೋಧಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಅತಿಥಿಗಳು ಭಾರತ ಸಂವಿಧಾನದ ಮಹತ್ವ ಮತ್ತು ಅಂಬೇಡ್ಕರ್ರವರನ್ನು ಕು-ರಿತು ವಿದ್ಯಾರ್ಥಿಗಳಿಗೆ ಜಾಗೃತಿಯನ್ನು ಮೂಡಿಸಿದರು.

ವಿದ್ಯಾರ್ಥಿಗಳು ಸಂವಿಧಾನದ ಕುರಿತು ಮತ್ತು ಅಂಬೇಡ್ಕರರವರ ಕುರಿತು ತಮ್ಮ ಅನಿಸಿಕೆಗಳನ್ನು ತಿಳಿಸಿದರು. ವೇದಿಕೆಯ ಮೇಲೆ ಇರುವ ಅಧಿಕಾರಿಗಳು ನಂತರ ಭಾರತ ಸಂವಿಧಾನದ ಪೀಠಿಕೆಯನ್ನು ಎಲ್ಲಾ ವಿದ್ಯಾರ್ಥಿಗಳ ಸಮ್ಮುಖದಲ್ಲಿ ಓದಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಡಳಿತ ಅಧಿಕಾ-ರಿಗಳು, ಜಿಲ್ಲಾ ಪಂಚಾಯಿತಿ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆಯ ಅಧಿಕಾ-ರಿಗಳು, ಕಾಲೇಜಿನ ಎಲ್ಲಾ ಉಪನ್ಯಾಸಕರು, ಸಿಬ್ಬಂದಿಯವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನಾಮಫಲಕಗಳಲ್ಲಿ ಕಡ್ಡಾಯವಾಗಿ ಕನ್ನಡ ಬಳಸಿ; ಇಲ್ಲದಿದ್ದರೆ ಪರವಾನಿಗೆ ರದ್ದು

ಬಳ್ಳಾರಿ: ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಉದ್ದಿಮೆದಾರರು ತಮ್ಮ ಉದ್ದಿಮೆಯ ನಾಮಫಲಕಗಳಲ್ಲಿ ಕಡ್ಡಾಯವಾಗಿ ಕನ್ನಡವನ್ನು ಬಳಸಬೇಕು. ತಪ್ಪಿದಲ್ಲಿ ಉದ್ದಿಮೆಗಳ ಪರವಾನಿಗೆಗಳನ್ನು ರದ್ದುಪಡಿಸಿ ಉದ್ದಿಮೆಯನ್ನು ಸ್ಥಗಿತಗೊಳಿಸಲು ಕ್ರಮವಹಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತ ಎಸ್.ಖಲೀಲ್ಸಾಬ್ ಅವರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯದಲ್ಲಿ ಕನ್ನಡವು ಆಡಳಿತ ಭಾಷೆಯಾಗಿದ್ದು, ಎಲ್ಲಾ ಉದ್ದಿಮೆಗಳ ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಳಸುವಂತೆ ಸರ್ಕಾರದಿಂದ ಕಾಯ್ದೆ ಜಾ-ರಿಯಾಗಿದೆ.

ಸರ್ಕಾರದ ಆದೇಶದನ್ವಯ ಯಾವುದೇ ಉದ್ದಿಮೆಯ ನಾಮಫಲಕವು ಪ್ರಧಾನವಾಗಿ ಶೇ.60 ರಷ್ಟು ಸ್ಥಳ ಮೀಸಲಿರಿಸಿ ಕನ್ನಡದಲ್ಲಿರಬೇಕು. ನಾಮಫಲಕದಲ್ಲಿ ಕನ್ನಡ ಭಾಷೆ ಮೇಲ್ಭಾಗದಲ್ಲಿ ಪ್ರದರ್ಶಿತವಾಗುವಂತೆ ಹಾಗೂ ಅನ್ಯಭಾಷೆಯ ನಾಮಫಲಕಕ್ಕಿಂತ ಕನ್ನಡ ನಾಮಫಲಕ ಮೇಲ್ಭಾಗದಲ್ಲಿರುವಂತೆ ಮತ್ತು ದೊಡ್ಡದಾಗಿರುವಂತೆ ಅಳವಡಿಸಬೇಕು.

ಮಾರ್ಚ್ 03 ರೊಳಗಾಗಿ ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ ಉದ್ದಿಮೆ, ಅಂಗಡಿಗಳ ನಾಮಫಲಕಗಳು ಪ್ರಧಾನವಾಗಿ ಕನ್ನಡದಲ್ಲಿರಬೇಕು. ತಪ್ಪಿದಲ್ಲಿ ಅಂತಹ ಯಾವುದೇ ನಾಮಫಲಕಗಳು ಕಂಡುಬಂದಲ್ಲಿ ನಿಯಮಾನುಸಾರ ದಂಡವಿಧಿಸಿ ತೆರವುಗೊಳಿಸಲು ಕ್ರಮ ವಹಿಸಲಾಗುವುದು ಹಾಗೂ ಉದ್ದಿಮೆಗಳ ಉದ್ದಿಮೆ ಪರವಾನಿಗೆಗಳನ್ನು ರದ್ದುಪಡಿಸಲಾಗುವುದು ಎಂದು ಅವರು ಪ್ರಟಣೆಯಲ್ಲಿ ತಿಳಿಸಿದ್ದಾರೆ.

## ಎಸ್ಎಸ್ಎಲ್ಸಿ ವಿದ್ಯಾರ್ಥಿಗಳಿಗೆ ಪ್ರೇರಣಾ ಶಿಬಿರ

ಬೆಳಗಾವಿ: ಡಾ ಸ ಜ ನಾಗಲೋತಿಮಠ ವಿಜ್ಞಾನ ಕೇಂದ್ರ,ಬೆಳಗಾವಿ, ಶ್ರೀ ಸಿದ್ಧರಾಮೇಶ್ವರ ವಿಜ್ಞಾನ ಮಹಾವಿದ್ಯಾಲಯ,ಬೆಳಗಾವಿ, ಜಯಭಾರತ ಫೌಂಡೇಶನ, ಬೆಳಗಾವಿ ಹಾಗೂ ಮಹಿಳಾ ಕಲ್ಯಾಣ ಸಂಸ್ಥೆ, ಬೆಳಗಾವಿ ಸಹಯೋಗದಲ್ಲಿ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಸಿದ್ಧತೆ ಕುರಿತು ಪ್ರೇರಣಾ ಶಿಬಿರವನ್ನು ರವಿವಾರ ದಿನಾಂಕ 03 ಮಾರ್ಚ ರಂದು ಮುಂಜಾನೆ 10.00 ಕ್ಕೆ ಶಿವಬಸವನಗರದ ಶ್ರೀ ಸಿದ್ಧರಾಮೇಶ್ವರ ವಿಜ್ಞಾನ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದೆ. ಶಿಬಿರದಲ್ಲಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಷಯಾಧಾರಿತ ತರಬೇತಿ, ಪರೀಕ್ಷಾ ಪೂರ್ವ ತಯಾರಿ ಕುರಿತು ಮಾಹಿತಿ ನೀಡಲಿದ್ದಾರೆ ಆಸಕ್ತರು ಶಂಕರ ಕತ್ತಿ 9880149513 ರವರನ್ನು ಸಂಪರ್ಕಿಸಿ ಹೆಸರು ನೊಂದಾಯಿಸುವಂತೆ ಗೌರವ ಕಾರ್ಯದರ್ಶಿಗಳು ಮಹಿಳಾ ಕಲ್ಯಾಣ ಸಂಸ್ಥೆ,ಬೆಳಗಾವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ರಾಘವೇಂದ್ರ ಸ್ವಾಮಿ ವೃಂದಾವನದ ವಾರ್ಷಿಕೋತ್ಸವ

ಬೆಳಗಾವಿ: ಖಾನಾಪುರ ತಾಲೂಕಿನ ಗಾಡಿಕೊಪ್ಪ ಗ್ರಾಮದಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿ ವೃಂದಾವನದ 51 ನೇ ವಾರ್ಷಿಕೋತ್ಸವವನ್ನು ಮಾ. 1 ಶುಕ್ರವಾರದಂದು ಆಚರಿಸುತ್ತಲಿದ್ದಾರೆ. ಕೂಡ್ಲಿ ಅಕ್ಷೋಭ್ಯ ಮಠದ ಶ್ರೀಗಳ ನೇತೃತ್ವದಲ್ಲಿ ಎಲ್ಲ ಕಾರ್ಯಕ್ರಮಗಳು ನಡೆಯಲಿವೆ. ರಾಯರ ವೃಂದಾವನಕ್ಕೆ ಅಭಿಷೇಕ, ಅಲಂಕಾರ, ಅಷ್ಟೋತ್ತರ ಪಠಣ, ಮಹಾನೈವೇದ್ಯ, ವಿಶೇಷ ಕಾರ್ಯಕ್ರಮಗಳು ನಡೆಯಲಿವೆ ಎಂದು ಮಠದ ಅರ್ಚಕ ಅಚ್ಯುತಾಚಾರ್ಯ ಪಾಟೀಲ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಹೊಸ ನಳ ಸಂಪರ್ಕ: ಅರ್ಜಿ ಆಹ್ವಾನ

ಬೆಳಗಾವಿ: ಕೆಯುಐಡಿಎಫ್ಸಿ ಹಾಗೂ ಮಹಾನಗರ ಪಾಲಿಕೆ ಮೂಲಕ ಹೊಸ ನಳ ಸಂಪರ್ಕಕ್ಕಾಗಿ ಸಾರ್ವಜನಿಕರು ಮಾ.15ರ ಒಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ತದ ನಂತರ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಎಂದು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನುಮತಿ ಇಲ್ಲದೆ ಮರ ಕಡಿತ: ಜಿಆರ್ ಟೆಕ್ ಪಾರ್ಕ್ ವಿರುದ್ಧ ಎಫ್ಐಆರ್ ದಾಖಲು


ಬೆಂಗಳೂರು: ವೈಟ್‌ಫೀಲ್ಡ್ ಮತ್ತು ಸಲಾರ್‌ಪುರಿಯಾ ಪ್ರೈವೇಟ್ ಲಿಮಿಟೆಡ್ ಕಾಂಪೌಂಡ್‌ನಲ್ಲಿ ಪರಿಶೀಲನೆ ನಡೆಸಿರುವ ಬಿಬಿಎಂಪಿ ಅಧಿಕಾ-ರಿಗಳು, ಅನುಮತಿ ಇಲ್ಲದೆ ಮರಗಳನ್ನು ಕಡಿದಿರುವ ಹಿನ್ನೆಲೆಯಲ್ಲಿ ಜಿಆರ್ ಟೆಕ್ ಪಾರ್ಕ್ ವಿರುದ್ಧ ಎಫ್ಐಆರ್ ದಾಖಲು ಮಾಡಿದ್ದಾರೆ.

ಸ್ಥಳೀಯ ನಿವಾಸಿಗಳ ದೂರು ಹಿನ್ನೆಲೆಯಲ್ಲಿ ಬಿಬಿಎಂಪಿ ಅರಣ್ಯ ಕೋಶದ ಅಧಿಕಾರಿಗಳು ಸ್ಥಳದಲ್ಲಿ ಪರಿಶೀಲನೆ ನಡೆಸಿದ್ದರು. ಈ ವೇಳೆ ಮರಗಳು ಕಡಿದಿರುವುದು ಗಮನಕ್ಕೆ ಬಂದಿದ್ದು, ಎಫ್ಐಆರ್ ದಾಖಲು ಮಾಡಿದ್ದಾರೆಂದು ತಿಳಿದುಬಂದಿದೆ.

ಬಿಬಿಎಂಪಿ ಮಹದೇವಪುರ ವಲಯದ ವಲಯ ಅರಣ್ಯಾಧಿಕಾರಿ ಸುದರ್ಶನ್ ಮಾತನಾಡಿ, ಮರಗಳನ್ನು ಕಡಿಯಲು ಬಿಬಿಎಂಪಿ ಅರಣ್ಯ ಇಲಾಖೆ ಯಾವುದೇ ಅನುಮತಿ ನೀಡಿಲ್ಲ. ಆದರೂ ಮರಗಳನ್ನು ಕಡಿಯಲಾಗಿದೆ. ಹೀಗಾಗಿ ಟೆಕ್ ಪಾರ್ಕ್ ವಿರುದ್ಧ ಎಫ್ಐಆರ್ ದಾಖಲಿಸಲಾಗಿದೆ ಎಂದು ಹೇಳಿದ್ದಾರೆ.

ಭದ್ರತಾ ಕಾರಣಗಳಿಂದಾಗಿ ಟೆಕ್ ಪಾರ್ಕ್‌ನವರು ಬೃಹತ್ ಗೇಟ್‌ಗಳನ್ನು ಸ್ಥಾಪಿಸಲು 6 ಮರಗಳ ಕಡಿತಕ್ಕೆ ಅನುಮತಿ ಕೋರಿದ್ದರು. ಆದರೀಗ ಹೆಚ್ಚುವರಿಯಾಗಿ 19 ಮರಗಳನ್ನು ಕಡಿದಿರುವುದು ಗಮನಕ್ಕೆ ಬಂದಿದೆ ಎಂದು ತಿಳಿಸಿದ್ದಾರೆ.

ಇದಲ್ಲದೆ, ಟೆಕ್ ಪಾರ್ಕ್ ಪಾದಚಾರಿ ಮಾರ್ಗವನ್ನೂ ಕೂಡ ಒತ್ತುವರಿ ಮಾಡಿ



ಟಿನ್ ಶೀಟ್ ಗಳನ್ನು ಹಾಕಿದ್ದಾರೆ. ಆದ-'ರೆ, ಅಧಿಕಾರಿಗಳು ಪ್ರಸ್ತುತ ಮರಗಳನ್ನು ಕಡಿದಿರುವ ವಿಚಾರದ ಕುರಿತಂತೆ ಮಾತ್ರ ಕ್ರಮ ಕೈಗೊಳ್ಳುತ್ತಿದ್ದಾರೆಂದು ಸ್ಥಳೀಯ ನಿವಾಸಿಗಳು ಆರೋಪಿಸಿದ್ದಾರೆ.

ಸಂದೀಪ್ ಅನಿರುಧನ್ ಎಂಬುವವರು ಮಾತನಾಡಿ, ಮರಗಳನ್ನು ಕಡಿಯುವುದಕ್ಕೂ ಒಂದು ತಿಂಗಳ ಮುಂಚಿತವಾಗಿ ಟಿನ್ ಶೀಟ್ ಗಳನ್ನು ಹಾಕಲಾಗಿತ್ತು. ಫುಟ್ ಪಾತ್ ಒತ್ತುವರಿ ಬಗ್ಗೆ ಬಿಬಿಎಂಪಿ ಯಾವುದೇ ಕ್ರಮ ಕೈಗೊಂಡಿಲ್ಲ.

"ಟೆಕ್ ಪಾರ್ಕ್ ಮಾಲೀಕರು ಫುಟ್‌ಪಾತ್‌ನಲ್ಲಿ ಮರಗಳನ್ನು ಕಡಿಯಲು ಯಾವುದೇ ರೀತಿಯಲ್ಲಿ ಅನುಮತಿ ಪಡೆದಿಲ್ಲ. ಕಾನೂನಾತ್ಮಕವಾಗಿ ಅರಣ್ಯ ಇಲಾಖೆ ಮಾತ್ರ ಪಾದಚಾರಿ ಮಾರ್ಗಗಳ ಮೇಲೆ ಮರಗಳನ್ನು ಕಡಿಯಬಹುದಾಗಿದೆ. ನೈಸರ್ಗಿಕ ವಿಕೋಪ ಎದುರಿಸುತ್ತಿರುವ ಈ ಸಂದರ್ಭಧಲ್ಲಿ ಈ ರೀತಿಯ ಮರಗಳಿಗೆ ಹಾನಿ ಮಾಡುವುದು ಮನುಷ್ಯರು ಎಷ್ಟು ಸಂವೇದನಾಶೀಲರಾಗಿದ್ದಾರೆಂಬುದನ್ನ ತೋರಿಸುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ನಡುವೆ ಬಿಡಬ್ಲ್ಯೂಎಸ್-ಎಸ್‌ಬಿ ಪೈಪ್‌ಲೈನ್ ಕಾಮಗಾರಿ ಬಗ್ಗೆ ದೊಡ್ಡಕಲ್ಲಸಂದ್ರದ ನಿವಾಸಿಗಳು ಕಳವಳ ವ್ಯಕ್ತಪಡಿಸಿದ್ದಾರೆ. ಈ ಪೈಪ್ ಲೈನ್ ಗಳು ದೊಡ್ಡಕಲ್ಲಸಂದ್ರ ಕೆರೆಯನ್ನು ಹಾದುಹೋಗುತ್ತಿದ್ದು, ಯೋಜನೆಗೆ ಏಳು ಮರಗಳು ಅಡ್ಡಿಯಾಗಿವೆ. ಈ ಮರಗಳನ್ನು ಕತ್ತರಿಸುವ ಸಾಧ್ಯತೆಗಳಿವೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

## ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್ ಡೆಹರಾಡೂನ್: 8ನೇ ತರಗತಿ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

ಬಳ್ಳಾರಿ: ಉತ್ತರಾಖಂಡ ರಾಜ್ಯದ ಡೆಹರಾಡೂನಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್ನಲ್ಲಿ 2025ನೇ ಸಾಲಿನ 8ನೇ ತರಗತಿಗಾಗಿ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ ಬಾಲಕ ಮತ್ತು ಬಾಲಕಿಯರಿಗೆ ಅರ್ಹತಾ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ಕೇಂದ್ರದಲ್ಲಿ 2024 ರ ಜೂನ್ 01 ರಂದು ನಡೆಯಲಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಸರ್ಕಾರದಿಂದ ಮಾನ್ಯತೆ ಪಡೆದ ಯಾವುದೇ ಶಾಲೆಯಲ್ಲಿ 7ನೇ ತರಗತಿಯಲ್ಲಿ ಓದುತ್ತಿರಬೇಕು ಅಥವಾ ಉತ್ತೀರ್ಣರಾಗಿರಬೇಕು. ದಿನಾಂಕ 01-01-2025 ರಂತೆ 111/2 ವರ್ಷದಿಂದ 13 ವರ್ಷದೊಳಗಿರುವ ಅಂದರೆ (ದಿನಾಂಕ 02-01-2012 ರಿಂದ 01-07-2013 ರೊಳಗೆ ಜನಿಸಿರುವ) ಬಾಲಕರು ಮತ್ತು ಬಾಲಕಿಯರು ಮಾತ್ರ ಈ ಪರೀಕ್ಷೆಗೆ ಅರ್ಹರಿರುತ್ತಾರೆ.

ಈ ಸಂಸ್ಥೆಯ ಮುಖ್ಯ ಗುರಿ ಯುವಕರನ್ನು ದೇಶದ ಸಶಸ್ತ್ರ ಪಡೆಗೆ ಸೇರಲು ಸಿದ್ದಗೊಳಿಸುವುದು ಹಾಗೂ ಸರ್ವ ರೀತಿಯ ವಿದ್ಯಾಭ್ಯಾಸ, ತರಬೇತಿ ನೀಡುವುದಾಗಿದೆ.

ಕಾಲೇಜಿನಲ್ಲಿ ವರ್ಷವೊಂದಕ್ಕೆ ವಿದ್ಯಾಭ್ಯಾಸದ ಶುಲ್ಕ ರೂ. 1,07,500/-ಗಳು (ಸಾಮಾನ್ಯ ವರ್ಗ) ಹಾಗೂ ರೂ. 93,900/- (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ) ಗಳಾಗಿರುತ್ತದೆ. ಇದು ಕಾಲಕಾಲಕ್ಕೆ ಹೆಚ್ಚಾಗಬಹುದು. ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯು ಪ್ರವೇಶ ಸಮಯದಲ್ಲಿ ರೂ.30,000/- ಗಳನ್ನು ಭದ್ರತಾ ಠೇವಣಿ ನೀಡಬೇಕಾಗುತ್ತದೆ (incl in annual fee). ಮೊತ್ತವನ್ನು ವಿಧ್ಯಾರ್ಥಿಯು ಪಧವೀಧರನಾದ ಮತ್ತು ವಿಧ್ಯಾರ್ಥಿನಿಯು ಪಧವೀಧರರೆಯಾದ ಬಳಿಕ ಹಿಂತಿರುಗಿಸಲಾಗುವುದು.

*ಅರ್ಜಿ ನಮೂನೆ ಪಡೆಯುವ ವಿಧಾನ:*

ಪ್ರಾಸ್ಪೆಕ್ಟಸ್, ಅರ್ಜಿ ನಮೂನೆ ಮತ್ತು ಹಳೆಯ ಪ್ರಶ್ನೆ ಪತ್ರಿಕೆಗಳ ಕಿರುಪುಸ್ತಕವನ್ನು ರಾಷ್ಟ್ರೀಯ ಭಾರತೀಯ ಮಿಲಟರಿ ಕಾಲೇಜು, ಗರಹಿ ಕ್ಯಾಂಟ್, ಡೆಹ್ರಾಡೂನ್, ಉತ್ತರಾಖಂಡ್, ಪಿನ್-248003 ಮೂಲಕ ಪಡೆಯಬಹುದು.

*ಆನ್ಲೈನ್ ಪಾವತಿ:*

ಸಾಮಾನ್ಯ ಅಭ್ಯರ್ಥಿಗಳಿಗೆ ರೂ.600/- ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ರೂ.555/- ಇದ್ದು, ಆನ್ಲೈನ್ ಪಾವತಿ ಮಾಡುವ ಮೂಲಕ ಪ್ರಾಸ್ಪೆಕ್ಟಸ್ ಕಮ್ ಅರ್ಜಿ ನಮೂನೆ ಮತ್ತು ಹಳೆಯ ಪ್ರಶ್ನೆ ಪತ್ರಿಕೆಗಳ ಕಿರು ಪುಸ್ತಕಗಳನ್ನು ಸಹ ಪಡೆಯಬಹುದು.

ವೆಬ್ಸೈಟ್ www.rimc.gov.inಟಿ ಪಾವತಿ ಸ್ವೀಕರಿಸಿದ ನಂತರ ಪ್ರಾಸ್ಪೆಕ್ಟಸ್ ಕಮ್ ಅರ್ಜಿ ನಮೂನೆ ಮತ್ತು ಹಳೆಯ ಪ್ರಶ್ನೆ ಪತ್ರಿಕೆಗಳ ಕಿರುಪುಸ್ತಕಗಳನ್ನು ಸ್ಪೀಡ್ ಪೋಸ್ಟ್ ಮೂಲಕ ರವಾನಿಸಲಾಗುತ್ತದೆ.

*ಬೇಡಿಕೆ ಕರಡು ಕಳುಹಿಸುವ ವಿಧಾನ:*

ಪ್ರಾಸ್ಪೆಕ್ಟಸ್ ಕಮ್ ಅರ್ಜಿ ನಮೂನೆ ಮತ್ತು ಹಳೆಯ ಪ್ರಶ್ನೆ ಪತ್ರಿಕೆಗಳ ಕಿರುಪುಸ್ತವನ್ನು ಸಾಮಾನ್ಯ ಅಭ್ಯರ್ಥಿಗಳಿಗೆ ರೂ.600/-ಗಳ ಬೇಡಿಕೆಯ ಕರಡು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ರೂ.555/-ಗಳ ಬೇಡಿಕೆಯ ಕರಡು ಕಳುಹಿಸಿ ಲಿಖಿತ ವಿನಂತಿಯ ಪರವಾಗಿ ಜಾತಿ ಪ್ರಮಾಣ ಪತ್ರದೊಂದಿಗೆ "THE COMMANDANT RIMC FUND" PAYABLE AT HDFC BANK, BALLUPUR CHOWK, DEHRA-DUN (BANK CODE. 1399), UTTARAKHAND ಈ ವಿಳಾಸಕ್ಕೆ ಕಳುಹಿಸಬಹುದು. ಪಿನ್ ಕೋಡ್ ಮತ್ತು ಸಂಪರ್ಕ ಸಂಖ್ಯೆಯೊಂದಿಗೆ ದೊಡ್ಡ ಅಕ್ಷರಗಳಲ್ಲಿ ಟೈಪ್ ಮಾಡಿ ಬರೆಯಬೇಕು. ಕಾನೂನು ಬಾಹಿರ ಅಥವಾ ಅಪೂರ್ಣ ವಿಳಾಸದಿಂದ ಉಂಟಾಗುವ ಪ್ರಾಸ್ಪೆಕ್ಟಸ್ನ ಸಾಗಾಣಿಕೆಯಲ್ಲಿ ಯಾವುದೇ ಅಂಚೆ ವಿಳಂಬ ಅಥವಾ ನಷ್ಟಕ್ಕೆ RIMS ಸಂಸ್ಥೆಯು ಜವಾಬ್ದಾರರಾಗಿರುವುದಿಲ್ಲ.

ಭರ್ತಿ ಮಾಡಿದ ನಿಗದಿತ ಅರ್ಜಿ ನಮೂನೆಯನ್ನು ದ್ವಿಪ್ರತಿಯಲ್ಲಿ ಏಪ್ರೀಲ್ 15 ರೊಳಗಾಗಿ ನಿರ್ದೇಶಕರು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕೆ ಎಮ್ ಕಾರ್ಯಪ್ಪ ಭವನ್, ನಂ, 58 ಫೀಲ್ಡ್ ಮಾರ್ಷಲ್ ಕೆ ಎಮ್ ಕಾರ್ಯಪ್ಪ ರಸ್ತೆ, ಬೆಂಗಳೂರು-25 ಇವರಿಗೆ ಸಲ್ಲಿಸಬೇಕು.

**ಬೇಕಾದ ದಾಖಲೆಗಳು:***

ಮುನ್ಸಿಪಾಲಿಟಿ, ಗ್ರಾಮ ಪಂಚಾಯತ್ ಪ್ರಾಧಿಕಾರ ವತಿಯಿಂದ ಆಂಗ್ಲ ಭಾಷೆಯಲ್ಲಿ ಪಡೆದ ಅಭ್ಯರ್ಥಿಯ ಜನ್ಮ ಪ್ರಮಾಣ ಪತ್ರದ ಧೃಢೀಕೃತ ಪ್ರತಿ. 5 ಪಾಸಪೋರ್ಟ್ ಅಳತೆಯ ಭಾವಚಿತ್ರಗಳು (ಅರ್ಜಿಯಲ್ಲಿ ಅಂಟಿಸಿದ ಭಾವಚಿತ್ರವನ್ನು ಸೇರಿಸಿ). ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರು, ಸಕ್ಷಮ ಪ್ರಾಧಿಕಾರದಿಂದ ನೀಡಿದ ಜಾತಿ ಪ್ರಮಾಣ ಪತ್ರದ ದೃಢೀಕೃತ (ಪ್ರತಿ ಆಂಗ್ಲ ಭಾಷೆಯಲ್ಲಿ ಇರುವಂತೆ). ಪರೀಕ್ಷಾ ಪ್ರವೇಶ ಪತ್ರವನ್ನು ತ್ವರಿತ ಅಂಚೆದ್ವಾರ ರವಾನಿಸಲು ರೂ.42/- ರ ಅಂಚೆ ಚೀಟಿ ಲಗತ್ತಿದ ಸ್ವವಿಳಾಸ ಲಕೋಟೆ.

ಮುಖ್ಯೋಪಾಧ್ಯಾಯರಿಂದ ಅಭ್ಯರ್ಥಿಯ ಜನ್ಮ ದಿನಾಂಕ ಮತ್ತು ಓದುತ್ತಿರುವ ತರಗತಿ ಬಗ್ಗೆ ಪಡೆದ ಪ್ರಮಾಣ ಪತ್ರದ ಮೂಲ ಪ್ರತಿ (ದೃಢೀಕರಿಸಿದ ಅಭ್ಯರ್ಥಿಯ ಭಾವ ಚಿತ್ರದೊಂದಿಗೆ). ಈ ರಾಜ್ಯದ ವಾಸಸ್ಥಾನ ದೃಢೀಕರಣ ಪತ್ರ ತಹಶೀಲ್ದಾರರಿಂದ ಪಡೆದಿರಬೇಕು.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಅಥವಾ ದೂ.0836-2440176 ಗೆ ಸಂಪರ್ಕಿಸಬಹುದು ಎಂದು ಧಾರವಾಡ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂವಿಧಾನ ಪಾತ್ರ ಅರಿಯಿರಿ: ರಜನಿ ಕುಮಾರಿ



ಬಳ್ಳಾರಿ: ಸಮಾಜದಲ್ಲಿ ಸಂವಿಧಾನವು ಬಹಳ ಮಹತ್ವ ಪೂರ್ಣವಾಗಿದ್ದು, ಎಲ್ಲರೂ ಸಂವಿಧಾನವನ್ನು ಅರಿತುಕೊಳ್ಳಬೇಕು ಎಂದು ವುಂಕಿ ಸಣ್ಣ ರುದ್ರಪ್ಪ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ರಜನಿ ಕುಮಾರಿ ಅವರು ತಿಳಿಸಿದರು.

ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಅಂಗವಾಗಿ ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು ಮಂಗಳವಾರದಂದು ವುಂಕಿ ಸಣ್ಣ ರುದ್ರಪ್ಪ ಕಾನೂನು ಮಹಾವಿದ್ಯಾಲಯ ಸಭಾಂಗಣದಲ್ಲಿ ಸಂವಿಧಾನ ಕುರಿತು ಏರ್ಪಡಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಂವಿಧಾನವೆಂದರೆ ಈ ದೇಶದ ಮೂಲಭೂತ ಕಾನೂನು. ಭಾರತದ ಎಲ್ಲಾ ಪ್ರಜೆಗಳು ಸಂವಿಧಾನದ ಬಗ್ಗೆ, ಪ್ರಜಾಪ್ರಭುತ್ವ, ಮತದಾನದ ಮಹತ್ವದ ಬಗ್ಗೆ ತಿಳಿದುಕೊಂಡರೆ ಮಾತ್ರ ಪ್ರಬುದ್ಧ ಭಾರತವನ್ನು ನಾವು ಕಾಣಬಹುದು. ಸಂವಿಧಾನದಡಿಯಲ್ಲಿ ಪ್ರತಿಯೊಬ್ಬರೂ ಸಮಾನರು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಸಂವಿಧಾನದ ಪ್ರತಿಜ್ಞಾ ವಿಧಿಯನ್ನು ಭೋಧಿಸಿದರು.

ಬಳಿಕ, ನಗರದ ಬಳ್ಳಾರಿ ಬ್ಯುಸಿನೆಸ್ ಕಾಲೇಜಿನಲ್ಲಿ ಏರ್ಪಡಿಸಿದ್ದ ಸಂವಿಧಾನ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಡಾ.ಎಂ.ರಾಮಚಂದ್ರ ಅವರು ಮಾತನಾಡಿ, ಸಂವಿಧಾನ ಒಂದೇ ಜಾತಿ, ಧರ್ಮಕ್ಕೆ ಸಂಬಂಧಿಸಿದಿಲ್ಲ. ಎಲ್ಲಾ ವರ್ಗದವರಿಗೂ ಸಂಬಂಧಿಸಿದ್ದು, ನಾವೆಲ್ಲರೂ ಸಂವಿಧಾನವನ್ನು ಉಳಿಸಿ ಬೆಳೆಸಿ ಕಾಪಾಡಿಕೊಂಡು ಹೋಗುವುದು ನಮ್ಮ ಕರ್ತವ್ಯವಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿಯವರಾದ ಕೊಟ್ರೇಶ್, ಸ್ವಪ್ನಾ, ವೀರಾರೆಡ್ಡಿ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು, ಇನ್ನಿತರರು ಪಾಲ್ಗೊಂಡಿದ್ದರು.

# ಬಹುಶಿಸ್ತೀಯ ಸಂಶೋಧನೆಯು ಹಲವಾರು ಕ್ಷೇತ್ರಗಳ ಜ್ಞಾನ: ಪ್ರೊ.ಬಟ್ಟು ಸತ್ಯನಾರಾಯಣ

ಬಳ್ಳಾರಿ: ಬಹುಶಿಸ್ತೀಯ ಸಂಶೋಧನೆಯಲ್ಲಿ ನಿರ್ದಿಷ್ಟ ಸಮಸ್ಯೆಗೆ ಹಲವಾರು ಕ್ಷೇತ್ರಗಳ ಜ್ಞಾನವನ್ನು ಬಳಸಲಾಗುತ್ತದೆ ಎಂದು ಕಲಬುರಗಿಯ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಟ್ಟು ಸತ್ಯನಾರಾಯಣ ಅವರು ಅಭಿಪ್ರಾಯ ಪಟ್ಟರು.

ನಗರದ ಹೊರವಲಯದಲ್ಲಿನ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಬುಧವಾರ ಸಮಾಜ ವಿಜ್ಞಾನ ನಿಕಾಯದ ವತಿಯಿಂದ ಏರ್ಪಡಿಸಿದ್ದ 'ಸಮಾಜ ವಿಜ್ಞಾನದಲ್ಲಿ ಬಹುಶಿಸ್ತೀಯ ಪ್ರಚಲಿತ ಸಂಶೋಧನೆಗಳು' ಎಂಬ ವಿಷಯದ ಕು-ರಿತು ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಶೋಧನಾ ವಿದ್ಯಾರ್ಥಿಗಳು ಒಂದು ವಿಷಯದಲ್ಲಿ ಸಂಶೋಧನೆಯಲ್ಲಿ ನಿರತವಾಗಿರದೇ ಬಹುಶಿಸ್ತಿಯ ಸಂಶೋಧನೆಗೆಳಿಗೆ ಒತ್ತು ನೀಡಬೇಕು. ಇದರಿಂದ ಸಮಾಜ, ಜನಾಂಗ ಹಾಗೂ ದೇಶದ ಬೆಳವಣಿಗೆಗೆ ಬಹುಶಿಸ್ತೀಯ




ಸಂಶೋಧನೆಗಳು ಪೂರಕವಾಗುತ್ತದೆ. ಸಂಶೋಧನೆಯಲ್ಲಿ ವಿಶೇಷ ಕೌಶಲ್ಯಗಳನ್ನು ಬಳಸಿಕೊಂಡು ವೈಜ್ಞಾನಿಕ ರೂಪ ಕೊಡುವುದು ಮುಖ್ಯವಾಗಿದೆ ಎಂದು ಹೇಳಿದರು.

ಕೊಡಗು ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಅಶೋಕ್ ಆಲೂರ್ ಅವರು ಮಾತನಾಡಿ, ಬಹುಶಿಸ್ತೀಯ ವಿಧಾನವು ಸಾಮಾಜಿ-ಕ, ಆರ್ಥಿಕ, ರಾಜಕೀಯ, ಮಾನಸಿಕ, ಭೌಗೋಳಿಕ ಅಂಶಗಳನ್ನು ಒಳಗೊಂಡಿದೆ. ಸಂಶೋಧನೆಫಯೂ ಕೇವಲ ಶಿಕ್ಷಣ-ಕ್ಕೆ ಮಾತ್ರ ಸೀಮಿತವಾಗದೆ ಸಮಾಜದ ಬೆಳವಣಿಗೆಗಾಗಿ ಉಪಯುಕ್ತವಾಗಬೇಕು. ಸಂಶೋಧನಾ ವಿದ್ಯಾರ್ಥಿಗಳು ಬಹುಶಿಸ್ತೀಯ ಸಂಶೋಧನೆಗೆ ಹೆಚ್ಚು ಒತ್ತು ನೀಡಿ ಎಂದು ಕರೆ ನೀಡಿದರು.

ವಿಶ್ವ ವಿದ್ಯಾಲಯದ ಕುಲಪತಿಗಳಾದ ಪ್ರೊ.ಅನಂತ ಎಲ್ ಝುಂಡೇಕರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂಶೋಧನಾ ವಿದ್ಯಮಾನಗಳ ಕು-ರಿತು ತಿಳಿದುಕೊಳ್ಳಲು ಬಹುಶಿಸ್ತೀಯ ಸಂಶೋಧನೆಯೂ ಹೆಚ್ಚು ಮಹತ್ವ ಹಾಗೂ ಪರಿಣಾಮಕಾರಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿವಿಯ ಕುಲಸಚಿವರಾದ ರುದ್ರೇಶ್.ಎಸ್.ಎನ್, ಕುಲಸಚಿವರು (ಮೌಲ್ಯಮಾಪನ) ಪ್ರೊ. ರಮೇಶ್ ಓಲೇಕಾರ್, ವಿತ್ತಾಧಿಕಾರಿ ಪ್ರೊ.ಸದ್ಯೋಜಾತಪ್ಪ, ಸಮ್ಮೇಳನದ ಸಂಚಾಲಕರಾದ ಪ್ರೊ.ಗೌರಿ ಮಾಣಿಕ್ ಮಾನಸ ಹಾಗೂ ಪ್ರೊ.ತಿಪ್ಪೇಸ್ವಾಮಿ.ಹೆಚ್ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಂ-ಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ, ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸಮ್ಮೇಳನದಲ್ಲಿ ನೂರಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿ ತಮ್ಮ ಸಂಶೋಧನಾ ಕುರಿತಾದ ಪ್ರಬಂಧವನ್ನು ಮಂಡಿಸಿದರು.

ಕಾರ್ಯಕ್ರಮವನ್ನು ಡಾ. ಶ್ರೀದೇವಿ ಆಲೂರ ನಿರೂಪಿಸಿದರು. ಡಾ. ಹೆಚ್. ತಿಪ್ಪೇಸ್ವಾಮಿ ಅತಿಥಿಗಳನ್ನು ಸ್ವಾಗತಿಸಿದರು. ಡಾ.ವೀರಪ್ರಕಾಶ ವಂದಿಸಿದರು.

## ಯುವನಿಧಿ ಯೋಜನೆ: ಸ್ವಯಂ ಘೋಷಣೆ ಕಡ್ಡಾಯ ಫೆ. 29 ಕೊನೆ ದಿನ

ಬೆಳಗಾವಿ: ಯುವನಿಧಿ ಯೋಜನೆಯಡಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಈಗಾಗಲೇ ಅರ್ಜಿ ಸಲ್ಲಿಸಿದ್ದು, ಸೇವಾ ಸಿಂಧು ಪೋರ್ಟಲ್‌ನಲ್ಲಿ ಫೆ.29 ರವರೆಗೆ ಸ್ವಯಂ ಘೋಷಣೆ ಪ್ರಮಾಣ ಪತ್ರ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿದ ಅಭ್ಯರ್ಥಿಗಳಿಗೆ ಜನವರಿ 2024 ರಂದು ನೇರ ನಗದು ವರ್ಗಾವಣೆ ಮಾಡಲಾಗಿದೆ. ಈ ಯೋಜನೆಯಡಿ ಪ್ರತಿ ತಿಂಗಳು ಪಡೆಯಬೇಕಾದರೆ ಪ್ರತಿ ತಿಂಗಳಲ್ಲಿ ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲ. ಸ್ವಯಂ ಉದ್ಯೋಗ ಇಲ್ಲ ಎಂದು ಸ್ವಯಂ ಘೋಷಣೆ ಮಾಡಬೇಕಾಗಿರುತ್ತದೆ.

ಪ್ರಯೋಜನ ಪಡೆಯುತ್ತಿರುವ ಅಭ್ಯರ್ಥಿಗಳು ಪ್ರತಿ ತಿಂಗಳು 25 ರೊಳಗೆ ಸ್ವಯಂ ಘೋಷಣೆ ಕಡ್ಡಾಯವಾಗಿ ಮಾಡಬೇಕು. ಘೋಷಣೆ ಮಾಡದೇ ಇರುವ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ https://sevasindhugs.karnataka.gov.in ವೆಬ್‌ಸೈಟ್ ವೀಕ್ಷಸಬಹುದು ಅಥವಾ 0831–2443948 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳವಡಿ ಮಲ್ಲಮ್ಮ ಉತ್ಸವ: ಮದ್ಯ ಮಾರಾಟ ನಿಷೇಧ

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ಬೆಳವಡಿ ಮಲ್ಲಮ್ಮ ಉತ್ಸವವನ್ನು 28 ರಿಂದ ಫೆ.29 ರವರೆಗೆ ಆಚರಿಸಲಾಗುತ್ತಿದೆ. ಆದ್ದರಿಂದ ಮಂಗಳವಾರ (ಫೆ.27) ಸಂಜೆ 6 ಗಂಟೆಯಿಂದ ರಿಂದ ಮಾ.01 ಬೆಳಿಗ್ಗೆ 6 ಗಂಟೆಯವರೆಗೆ ಬೈಲಹೊಂಗಲ ತಾಲೂಕಿನ ಬೆಳವಡಿ ಗ್ರಾಮದ ಎಲ್ಲಾ ಮದ್ಯದ ಅಂಗಡಿಗಳನ್ನು ಬಂದ್ ಮಾಡಿ ಮದ್ಯ ಮಾರಾಟ ನಿಷೇಧಿಸಿ ಆದೇಶಿಸಲಾಗಿದೆ.

ಒಂದು ವೇಳೆ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ವಿರುದ್ಧ ಕ್ರಮವನ್ನು ಜರುಗಿಸಿ ಶಿಕ್ಷೆಗೆ ಒಳಪಡಿಸಲಾಗಿದು ಎಂದು ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್ ಪಾಟೀಲ ಆದೇಶದಲ್ಲಿ ತಿಳಿಸಿದ್ದಾರೆ.

## ಅನಧಿಕೃತವಾಗಿ ಮಕ್ಕಳನ್ನು ಇಟ್ಟುಕೊಂಡರೆ ಕಾನೂನು ಕ್ರಮ

ಬೆಳಗಾವಿ: ಆರೈಕೆ ಮತ್ತು ರಕ್ಷಣೆಗೆ ಅವಶ್ಯಕತೆ ಇರುವ ಯಾವುದೇ ವ್ಯಕ್ತಿ ಸಂಘ ಸಂಸ್ಥೆಗಳಲ್ಲಿ ಮಕ್ಕಳನ್ನು ಇರಿಸಿಕೊಳ್ಳಲು ಬಾಲನ್ಯಾಯ (ಆರೈಕೆ ಮತ್ತು ರಕ್ಷಣೆ) ಕಾಯ್ದೆ 2015 ನಿಯಮಗಳು 2016 ಹಾಗೂ ತಿದ್ದುಪಡಿ 2022 ರಡಿಯಲ್ಲಿ ಸೆಕ್ಷನ್ 41 ರ ಅನ್ವಯ ಕಡ್ಡಾಯವಾಗಿ ನೋಂದಣಿ ಮಾಡುವದು ಅವಶ್ಯವಿರುತ್ತದೆ.

ನೋಂದಣಿ ಇಲ್ಲದೇ ಮಕ್ಕಳನ್ನು ಅಭಿರಕ್ಷಣೆಯಲ್ಲಿ ಇಟ್ಟುಕೊಂಡಿದ್ದೇ ಆದರೆ ಕಾನೂನು ಬಾಹಿರ ಅಭಿರಕ್ಷಣೆ ಎಂದು ಅವರ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕಾಗಿರುತ್ತದೆ. ಇತ್ತೀಚಿನ ದಿನಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಕೆಲವು ವ್ಯಕ್ತಿಗಳು/ಸಂಘ ಸಂಸ್ಥೆಗಳು ಮಕ್ಕಳ ಆರೈಕೆ ಕೇಂದ್ರಗಳನ್ನು ತೆರೆದು ಬಾಲನ್ಯಾಯ ಕಾಯ್ದೆ 2015 ಹಾಗೂ ನಿಯಮಗಳು 2016ನ್ನು ಉಲ್ಲಂಘಿಸಿ ಮಕ್ಕಳನ್ನು ತಮ್ಮ ಸಂಸ್ಥೆಯಲ್ಲಿ ಅನಧಿಕೃತವಾಗಿ ಇಟ್ಟುಕೊಂಡಿರುವದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಗಮನಕ್ಕೆ ಬಂದಿರುತ್ತದೆ.

ಹಾಗಾಗಿ ಜಿಲ್ಲೆಯಲ್ಲಿ ಯಾವುದೇ ವ್ಯಕ್ತಿ, ಸಂಘ–ಸಂಸ್ಥೆಗಳು, ಮಠಗಳು, ಚರ್ಚಗಳು, ಮಸೀದಿಗಳು ಅದರಂತೆ ಮಕ್ಕಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸದೇ ಮಕ್ಕಳನ್ನು ಮೂಲಭೂತ ಹಕ್ಕುಗಳಿಂದ ವಂಚನೆಗೊಳಪಡಿಸುವುದು ಕಂಡು ಬಂದಿರುತ್ತದೆ.

ಅದರಂತೆ ಯಾರಾದರೂ ಮಕ್ಕಳ ಪಾಲನಾ ಸಂಸ್ಥೆ, ಮಕ್ಕಳ ಕುಠೀರ, ಅನಾಥ ಆಶ್ರಮ, ದೇವರ ಮನೆ, ಮಕ್ಕಳ ತಂಗುಧಾಮ ತೆರೆದು ಮಕ್ಕಳನ್ನು ಆರೈಕೆ ಮಾಡುತ್ತೇವೆ ಎಂಬ ಆಸಕ್ತಿಯನ್ನು ಹೊಂದಿದ್ದರೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕವನ್ನು ಸಂಪರ್ಕಿಸಿ (ರೂಂ ನಂ–204, 2ನೆ ಮಹಡಿ, ಸುವರ್ಣ ವಿಧಾನಸೌಧ, ಬೆಳಗಾವಿ– 8073972929) ಮಾಹಿತಿಯನ್ನು ಪಡೆದು ಬಾಲನ್ಯಾಯ ಕಾಯ್ದೆಯಡಿಯಲ್ಲಿ ಪ್ರಸ್ತಾವನೆ ಸಲ್ಲಿಸಬೇಕು.

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಸ್ಥಳಕ್ಕೆ ಭೇಟಿ ಮಾಡಿ ಮಕ್ಕಳ ಮೂಲಭೂತ ಸೌಕರ್ಯಗಳ ಕುರಿತು ಖಾತರಿ ಪಡಿಸಿಕೊಂಡ ನಂತರವೇ ಕಾನೂನಿನ ಪ್ರಕಾರ ಸದರಿ ಸಂಸ್ಥೆಯನ್ನು ನೋಂದಾಯಿಸಿ ಪ್ರಮಾಣಪತ್ರ ನೀಡಲಾಗುವುದು ಎಂದು ಬೆಳಗಾವಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಮಹಾಂತೇಶ ಹೆಚ್ ಭಜಂತ್ರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಸಂಭ್ರಮ 50: ರಾಜ್ಯಾದ್ಯಂತ ಜ್ಯೋತಿ ರಥಯಾತ್ರೆ ಸಂಚಾರ

## ಅಥಣಿಯಲ್ಲಿ ಜ್ಯೋತಿ ರಥಯಾತ್ರೆಗೆ ಅದ್ದೂರಿ ಸ್ವಾಗತ

ಬೆಳಗಾವಿ: ಕರ್ನಾಟಕ ಸಂಭ್ರಮ 50ರ ಅಂಗವಾಗಿ ರಾಜ್ಯಾದ್ಯಂತ ಸಂಚರಿಸುತ್ತಿರುವ ಜ್ಯೋತಿ ರಥಯಾತ್ರೆ ಬುಧವಾರ (ಫೆ.28) ಅಥಣಿ ಪಟ್ಟಣಕ್ಕೆ ಆಗಮಿಸಿದ್ದು, ಜ್ಯೋತಿ ರಥಯಾತ್ರೆಯನ್ನು ಅದ್ದೂರಿಯಿಂದ ಸ್ವಾಗತಿಸಲಾಯಿತು.

ಅಥಣಿ ತಾಲೂಕಾ ತಹಶೀಲ್ದಾರ ವಾಣಿ, ಜನಪ್ರತಿನಿಧಿಗಳು, ವಿವಿಧ ಇಲಾಖೆಯ ಅಧಿಕಾರಿಗಳು, ಕನ್ನಡಪರ ಸಂಘ–ಸಂಸ್ಥೆಗಳು ಸಡಗರದಿಂದ ಜ್ಯೋತಿ ರಥ–ಯಾತ್ರೆಯನ್ನು ಬರಮಾಡಿಕೊಂಡರು. ಬಳಿಕ ಮೆರವಣಿಗೆ ಮೂಲಕ ಅಥ–ಣಿಯಿಂದ ಬೀಳ್ಕೊಡಲಾಯಿತು.



ಕನ್ನಡ ನಾಡಿನ ವೈವಿಧ್ಯಮಯ ಸಂಸ್ಕೃತಿಗಳನ್ನು ಸಾರುವ ಜ್ಯೋತಿ ರಥ–ಯಾತ್ರೆ ಮೆರವಣಿಗೆಯಲ್ಲಿ, ಡೊಳ್ಳು ಕುಣಿತ, ವಾದ್ಯ ಮೇಳ ಸೇರಿದಂತೆ ವಿವಿಧ ಕಲಾ ತಂಡಗಳು ಪಾಲ್ಗೊಂಡಿದ್ದವು.

ಜ್ಯೋತಿ ರಥಯಾತ್ರೆಯು ಅಥಣಿಯಿಂದ ಜಿಲ್ಲೆಯ ವಿವಿಧ ತಾಲೂಕುಗಳಾದ ಕಾಗವಾಡ, ರಾಯಬಾಗ, ನಿಪ್ಪಾಣಿ, ಚಿಕ್ಕೋಡಿ, ಸಂಕೇಶ್ವರ, ಹುಕ್ಕೇರಿ, ಹಿಡಕಲ ಜಲಾಶಯ, ಬೆಳಗಾವಿ, ಖಾನಾಪೂರ, ನಂದಗಡ, ಚನ್ನಮ್ಮನ ಕಿತ್ತೂರು, ಬೈಲಹೊಂಗಲ, ಯರಗಟ್ಟಿ, ಗೋಕಾಕ, ಮೂಡಲಗಿ, ರಾಮದುರ್ಗ, ಮಲಪ್ರಭಾ ಜಲಾಶಯ, ಸವದತ್ತಿ ಮೂಲಕ ಸಂಚರಿಸಿ ಮಾರ್ಚ್.17 ರಂದು ಧಾರವಾಡ ಜಿಲ್ಲೆಗೆ ತಲುಪಲಿದೆ.

ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆ ತಾಲೂಕಾಧಿಕಾರಿ ಡಾ. ಬಸನಗೌಡ ಕಾಗೆ, ಅಥಣಿ ಪುರಸಭೆ ಮುಖ್ಯಾಧಿಕಾರಿ ಶಿವಾನಂದ್ ಗುಡಿಮನಿ, ಶಿಶು ಅಭಿವೃದ್ಧಿ ಇಲಾಖೆ ಅಧಿಕಾರಿ ಅಶೋಕ್ ಕಾಂಬಳೆ, ಪಿಎಸ್‌ಐ ಕಾರಜೋಳ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ವೆಂಕಟೇಶ ಕುಲಕರ್ಣಿ, ಶಿಕ್ಷಣ ಇಲಾಖೆಯ ಎಂ.ಆರ್ ಹಲಸಂಗಿ, ತಾಲೂಕಾ ಪಂಚಾಯತ್ ಇಓ ಶಿವಾನಂದ ಕಲ್ಲಾಪುರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತ–ರಿದ್ದರು. ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು, ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

## ಶಿವಾನಂದ ಮಂಗಾನವರಗೆ ಕರ್ನಾಟಕ ಕೃಷಿ ಸೇವಾ ರೈತರತ್ನ ಪ್ರಶಸ್ತಿ



ಬೆಳಗಾವಿ: ಬಸವನ ಬಾಗೇವಾಡಿ ತಾಲೂಕಿನ ಯಂಬತ್ನಾಳ ಗ್ರಾಮದ ಶಿವಾನಂದ ಮಂಗಾನವರ ಅವರಿಗೆ ಕರ್ನಾಟಕ ಕೃಷಿ ಸೇವಾ ರೈತರತ್ನ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಫೆಬ್ರುವರಿ 26ರಂದು ಬೆಳಗಾವಿಯ ಕುಮಾರ ಗಂಧರ್ವರಂಗ ಮಂದಿರದಲ್ಲಿ ನಡೆದ ವಿಶ್ವಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಉತ್ಸವ ಕಾರ್ಯಕ್ರಮದಲ್ಲಿ ಈ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕೃಷಿ ಕ್ಷೇತ್ರದಲ್ಲಿಅಪಾರ ಸಾಧನೆ ಮಾಡಿದ್ದನ್ನು ಅನುಲಕ್ಷಿಸಿ ಈ ಪ್ರಶಸ್ತಿ ನೀಡಿಗೌರವಿಸಲಾಯಿತು.

ಶ್ರೀ ಮರುಳಸಿದ್ದೇಶ್ವರ ಕಲಾ ಪೋಷಕ ಸಂಘ ಮುರಗುಂಡಿ, ಕರ್ನಾಟಕ ರಾಜ್ಯಕಲಾವಿದರ ರಕ್ಷಣಾ ವೇದಿಕೆ ಬೆಂಗಳೂರು, ಸಪ್ತಸ್ವರ ಸಂಗೀತ ಕಲಾ ಬಳಗ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಈ ಸಮಾರಂಭಜರುಗಿತು.


ಪ್ರಗತಿ ಪರರೈತ ಶಿವಾನಂದ ಮಂಗಾನವರಗೆ ಅವರು ಕೃಷಿ ಕ್ಷೇತ್ರದಲ್ಲಿ ಮಾಡಿದ ಸಾಧನೆ ಹಲವಾರು ಪ್ರಶಸ್ತಿ, ಪುರಸ್ಕಾರಗಳು ಬಂದಿವೆ.

## ಪ್ರೀತಿಸಿ ಮದುವೆಯಾದವಳಿಗೆ ಪತಿ ವಿಷ ಉಣಿಸಿರುವ ಶಂಕೆ; ಚಿಕಿತ್ಸೆ ಫಲಿಸದೆ ಪತ್ನಿ ಸಾವು..!

ಬಳ್ಳಾರಿ: ನಗರದ ಕೌಲಬಜಾರ್‌ನಲ್ಲಿ ಗಂಡನೇ ಹೆಂಡತಿಗೆ ಊಟದಲ್ಲಿ ವಿಷ ಹಾಕಿ ಕೊಲೆ ಮಾಡಿದ ಆರೋಪ ಕೇಳಿಬಂದಿದೆ.

ಪ್ರೀತಿಸಿ ಮದುವೆಯಾಗಿದ್ದ ಸಾಧಿಕ್ ಸಾಬ್ ಮತ್ತು ಫರ್ಜಾನಾಭಿ ಜೋಡಿ ಪ್ರೀತಿಗೆ ಕೌಲಬಜಾರ್ ಜನರು ಆಸರೆಯಾಗಿದ್ದರು. ಇಂತಹ ಸುಖ ಸಂಸಾರದಲ್ಲಿ ಎಲ್ಲವೂ ಚೆನ್ನಾಗಿದೆ ಎನ್ನುವಷ್ಟರಲ್ಲಿ ಇದೀಗ ಈ ದುರ್ಘಟನೆ ನಡೆದಿದೆ.

ಹೆಂಡತಿ ದಪ್ಪ ಆಗಲಿ ಎಂದು ಔಷಧಿಯ ನೆಪದಲ್ಲಿ ಗಂಡ ಸಾಧಿಕ ಸಾಬ್ (25) ವಿಷ



ಬೆರಸಿದ್ದನಂತೆ. ಈ ಹಿನ್ನಲೆ ಮೂರು ದಿನಗಳ ಕಾಲ ವಿಮ್ಸ್ ಆಸ್ಪತ್ರೆಯಲ್ಲಿ ಮೃತ ಫರ್ಜಾನಾಭಿ (22) ಚಿಕಿತ್ಸೆಗೆ ದಾಖಲಾಗಿದ್ದರು. ಇಂದು ಚಿಕಿತ್ಸೆ ಫಲಿಸದೆ ಫರ್ಜಾನಾಭಿ ಮೃತರಾಗಿದ್ದಾರೆ.

ಈ ಕುರಿತು ಮೃತಳ ಪೋಷಕರು ಬಳ್ಳಾರಿ ಮಹಿಳಾ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿದ್ದಾರೆ.

## ಗ್ರಾಮೀಣ ರಸ್ತೆಗಳ ಅಭಿವೃದ್ಧಿಯಿಂದ ಪ್ರಗತಿ ಸಾಧ್ಯ: ರಾಹುಲ್ ಜಾರಕಿಹೊಳಿ



ಯಮಕನಮರಡಿ: ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆಗಳು ಅಭಿವೃದ್ಧಿಯಾದರೆ ಅದು ಪ್ರಗತಿಯ ಸಂಕೇತವಾಗಿದ್ದು, ನಾಗರಿಕರ ಸಂಚಾರಕ್ಕೆ ಅಗತ್ಯವಾಗಿದೆ ಎಂದು ಸತೀಶ್ ಶುಗರ್ಸ್ ನಿರ್ದೇಶಕ, ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಹೇಳಿದರು.

ಯಮಕನಮರಡಿ ಮತಕ್ಷೇತ್ರದ ಗುಜನಟ್ಟಿ ಕ್ರಾಸ್‌ದಿಂದ ಹಂದಿಗನೂರ ಗ್ರಾಮದವರಗೆ ಅಂದಾಜು 5 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ, ಕೇದನೂರ ಗ್ರಾಮದ ಲಕ್ಷ್ಮೀದೇವಿ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಯಮಕನಮರಡಿ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ತಂದೆ, ಸಚಿವ ಸತೀಶ್ ಜಾರಕಿಹೊಳಿ ಅವರು ಆದ್ಯತೆ ನೀಡಿದ್ದು, ಕ್ಷೇತ್ರವನ್ನು ಅಭಿವೃದ್ಧಿ ಪಥದಲ್ಲಿ ಮುನ್ನಡೆಸುವ ಮೂಲಕ ನಿಮ್ಮ ಆಶೋತ್ತರಗಳನ್ನು ಈಡೇರಿಸಿದ್ದಾರೆ. ಕ್ಷೇತ್ರದಲ್ಲಿ ಕುಡಿಯಲು ನೀರು, ರಸ್ತೆಗಳು ಸೇ–ರಿದಂತೆ ಎಲ್ಲಾ ರೀತಿಯ ಮೂಲ ಸೌಕರ್ಯಗಳನ್ನು ಒದಗಿಸಿದ್ದಾರೆ ಎಂದು ತಿಳಿಸಿದರು. ಇದೇ ವೇಳೆ ಕಾಮಗಾರಿ ನಿರ್ವಹಿಸುತ್ತಿರುವ ಗುತ್ತಿಗೆದಾರರು ಗುಣಮಟ್ಟದಿಂದ ತ್ವರಿತವಾಗಿ ರಸ್ತೆಯನ್ನು ಪೂರ್ಣಗೊಳಿಸುವಂತೆ ಸೂಚಿಸಿದರು. ಡಾ.ಬಿ.ಆರ್. ಅಂಬೇಡ್ಕರ್ ಶಕ್ತಿ ಸಂಘದ ನೂತನ ಶಾಖೆ ಉದ್ಘಾಟನೆ: ಯಮಕನಮರಡಿ ಮತಕ್ಷೇತ್ರದ ಸುತಗಟ್ಟಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಶಕ್ತಿ ಸಂಘದ ನೂತನ ಶಾಖೆಯನ್ನು ಯುವ ನಾಯಕ ರಾಹುಲ್ ಜಾರಕಿಹೊಳಿ ಉದ್ಘಾಟಿಸಿದರು. ನಂತರ ಮಾತನಾಡಿದ ಯುವ ನಾಯಕ ರಾಹುಲ್ ಜಾರಕಿಹೊಳಿ, ಡಾ. ಬಿಆರ್. ಅಂಬೇಡ್ಕರ್ ಅವರ ಹೆಸರು ಹೇಳಿ ಬದುಕುವ ಬದುಕು ನಮಗೆ ಬೇಡ. ಅವರ ಕ್ರಾಂತಿಯ ದಾರಿಯಲ್ಲಿ ನಾವೆಲ್ಲರೂ ಸಾಗಿ ಅವರ ಕನಸು–ಆಶಯಗಳನ್ನು ಕಾರ್ಯರೂಪಕ್ಕೆ ತರಬೇಕಾಗಿದೆ. ಜೈ ಭೀಮ್ ಎಂದರೆ ಅಂಬೇಡ್ಕರ್ ಅವರ ಕನಸು ಆಶಯಗಳು ಈಡೇರುವುದಿಲ್ಲ. ನಾವೆಲ್ಲರೂ ವಿದ್ಯಾವಂತರಾಗಿ, ಜಾಗೃತರಾಗಿ ಅಂಬೇಡ್ಕರ್ ರವರ ಚಿಂತನೆ, ವಿಚಾರಧಾರೆ, ಕ್ರಾಂತಿಯ ದಾರಿಯಲ್ಲಿ ನಡೆಯುವ ಮೂಲಕ ಅವರ ಕನಸು ಆಶಯಗಳನ್ನು ಕಾರ್ಯರೂಪಕ್ಕೆ ತರಬೇಕಾಗಿದೆ ಎಂದು ತಿಳಿಸಿದರು. ಕಡೋಲಿ ಗ್ರಾಮದಿಂದ ಅಗಸಗಾ ಗ್ರಾಮದವರೆಗೆ ಅಂದಾಜು 3.65 ಕೋಟಿ ರೂ. ವೆಚ್ಚದ ರಸ್ತೆ ಡಾಂಬ–ರೀಕರಣ ಕಾಮಗಾರಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಕೆಪಿಸಿಸಿ ಸದಸ್ಯ ಮಲಗೌಡ ಪಾಟೀಲ್, ಹಿರಿಯರು, ಯುವಕರು, ಮಹಿಳೆಯರು ಇದ್ದರು.

## ಕರ್ನಾಟಕ ಸಂಭ್ರಮ 50: ಜ್ಯೋತಿ ರಥಯಾತ್ರೆ ವೇಳಾ ಪಟ್ಟಿ

ಬೆಳಗಾವಿ: ಕರ್ನಾಟಕ ಸಂಭ್ರಮ 50ರ ಅಂಗವಾಗಿ ರಾಜ್ಯಾದ್ಯಂತ ಸಂಚರಿಸುತ್ತಿರುವ ಜ್ಯೋತಿ ರಥಯಾತ್ರೆ ಬುಧವಾರ (ಫೆ.28) ಅಥಣಿ ಪಟ್ಟಣಕ್ಕೆ ಆಗಮಿಸಿದ್ದು, ಬಳಿಕ ಜಿಲ್ಲೆಯ ವಿವಿದ ತಾಲೂಕುಗಳಿಗೆ ಜ್ಯೋತಿ ರಥಯಾತ್ರೆ ಸಂಚರಿಸಲಿದೆ. ಫೆ.28 ರಂದು ಬೆಳಗ್ಗೆ 9 ಗಂಟೆಗೆ ಅಥಣಿಗೆ ಆಗಮಿಸಿ ಬಳಿಕ ಕಾಗವಾಡದಲ್ಲಿ ವಾಸ್ತವ್ಯವಾಗಲಿದೆ. ಫೆ.29 ರಂದು ಕಾಗವಾಡ ಮಾ.1 ರಾಯಬಾಗ, ಮಾ. 2 ರಂದು ನಿಪ್ಪಾಣಿಗೆ ತೆರಳಿ ಬಳಿಕ ಚಿಕ್ಕೋಡಿಯಲ್ಲಿ ವಾಸ್ತವ್ಯ ಇರಲಿದೆ. ಮಾ. 3 ರಂದು ಚಿಕ್ಕೋಡಿ ಮಾ.4 ಸಂಕೇಶ್ವರ, ಮಾ.5 ರಂದು ಹುಕ್ಕೇರಿಗೆ ತಲುಪಿ ಹಿಡಕಲ್ ಜಲಾಶಯದಲ್ಲಿ ವಾಸ್ತವ್ಯ ಇರಲಿದೆ. ಮಾ. 6 ರಂದು ಹಿಡಕಲ್ ಜಲಾಶಯದಿಂದ ಬೆಳಗಾವಿಯಲ್ಲಿ ವಾಸ್ತವ್ಯ ಇರಲಿದೆ.ಅದೇ ರೀತಿಯಲ್ಲಿ ಮಾ.7 ರಂದು ಬೆಳಗಾವಿಯಿಂದ ಖಾನಾಪೂರದಲ್ಲಿ ವಾಸ್ತವ್ಯ., ಮಾ. 8 ರಂದು ಖಾನಾಪೂರ ಮಾ.9 ನಂದಗಡ, ಮಾ.10 ಚನ್ನಮ್ಮನ ಕಿತ್ತೂರು, ಮಾ. 11 ಬೈಲಹೊಂಗಲ ಮಾ.12 ಯರಗಟ್ಟಿ, ಮಾ. 13 ಗೋಕಾಕ, ಮಾ. 14 ಮೂಡಲಗಿ ಮಾ. 15 ರಂದು ರಾಮದುರ್ಗ, ಮಾ. 16 ರಂದು ಮಲಪ್ರಭಾ ಜಲಾಶಯದಿಂದ ಸವದತ್ತಿಯಲ್ಲಿ ವಾಸ್ತವ್ಯ ಇರಲಿದೆ, ಮಾ. 17 ರಂದು ಸವದತ್ತಿಯಿಂದ ದಾರವಾಡ ಜಿಲ್ಲೆಗೆ ತಲುಪಲಿದೆ ಎಂದು ಜಿಲ್ಲಾಧಿಕಾರಿ ನಿತೇಶ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೈಜ್ಞಾನಿಕ ಮನೋವೃತ್ತಿ ಜಾಗೃತಗೊಳ್ಳಲಿ: ಡಾ. ಜೆ. ಮಂಜಣ್ಣ

ದೇವರು, ಧರ್ಮ, ಆಧ್ಯಾತ್ಮ, ತತ್ವಜ್ಞಾನ ಇವುಗಳನ್ನು ಕೆದಕುತ್ತಾ ವಾದ–ವಿವಾದ ಮಾಡುವ ಬದಲು, ವಿಚಾರಗಳನ್ನು ಸಾರ್ವತ್ರಿಕರಣಗೊಳಿಸದೇ ಸಂಪ್ರದಾಯ, ರೂಢಿ, ಆಧುನಿಕ ಜೀವನಶೈಲಿಗಳಿಂದ ಧೂಳು ಹಿಡಿದಿರುವ ವೈಜ್ಞಾನಿಕ ಮನೋವೃತ್ತಿ ಯುವಕರಲ್ಲಿ ಜಾಗೃತಗೊಳ್ಳಲಿ ಎಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ರಸಾಯನ ಶಾಸ್ತ್ರೊ ವಿಭಾಗದ ಮುಖ್ಯಸ್ಥ ಜೆ. ಮಂಜಣ್ಣ ಕರೆ ನೀಡಿದರು. ಅವರು ಇಂದು ಶಿವಬಸವ ನಗರದ ಚಂದ್ರಗಿರಿ ಮಹಿಳಾ ಶಿಕ್ಷಣ ಮಹಾವಿದ್ಯಾಲಯದಲ್ಲಿ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಹಾಗೂ ಡಾ. ಸ. ಜ. ನಾಗಲೋಟಿಮಠ ವಿಜ್ಞಾನ ಕೇಂದ್ರದ ವತಿಯಿಂದ ಆಯೋಜಿಸಿದ್ದ ರಾಷ್ಟೊಥ–ಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮುಂದುವರೆದು ಮಾತನಾಡಿದ ಅವರು ವಿದೇಶಗಳಢಲ್ಲಿ ಅಲ್ಲಿನ ಅವಶ್ಯಕತೆ ಮತ್ತು ಅನಿವಾರ್ಯತೆಯಿಂದಾಗಿ ಹೆಚ್ಚು



ಸಂಶೋಧನೆಗಳಾದರೆ ಭಾರತದಲ್ಲಿನ ಹೇಳರವಾದ ಸಂಪನ್ಮೂಲ ಮತ್ತು ಸುಸ್ಥಿರ ವಾತಾವರಣದಿಂದಾಗಿ ಇಲ್ಲಿ ಅಷ್ಟೊಂದು ಆಧುನಿಕ ಸಂಶೋಧನೆಳಾಗಿಲ್ಲ. ಯುವಕರು ಈ ಮನಸ್ಥಿತಿಯಿಂದ ಹೊರಬಂದು ಸಂಶೋಧನೆಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಬೆಳಗಾವಿ ಅಸೋಶೀಯೇಷನ್ ಪಾರ್ ಸೈನ್ಸ ಎಜ್ಯುಕೇಶನ್ ಕಾರ್ಯದರ್ಶೀ ಕೆ. ಬಿ. ಹಿರೇಮಠ ಮಾತನಾಡಿ ಮೂಢನಂಬಿಕೆಗಳಿಂದ ನಿತ್ಯ ಜೀವನದಲ್ಲಿ ಏನೆಲ್ಲಾ ಅಪಾಯಗಳಿವೆ ಎಂಬುದನ್ನು ಅರ್ಥೈಸಿದಾಗ ಮಾತ್ರ ಜನ ಅವುಗಳಿಂದ ದೂರವಾಗುತ್ತಾರೆ. ಈ ಕಾರ್ಯವನ್ನು ಯುವಕರು ಮುಂದಾಗಿ ಕೈಗೊಳ್ಳಬೇಕು ಎಂದರು.

ಚಂದ್ರಗಿರಿ ಮಹಿಳಾ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎ. ಎಲ್. ಪಾಟೀಲ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ವಿಜ್ಞಾನ ಕೇಂದ್ರದ ಯೋಜನಾ ಸಹಾಯಕ ರಾಜಶೇಖರ ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾಧ್ಯಾಪಕ ಶ್ರೀಧರ ಖಿಳ್ಳಿಕೇತರ ವಂದಿಸಿದರು. ಇದೇ ಸಂದರ್ಭದಲ್ಲಿ "ವಿಕಸಿತ ಭಾರತಕ್ಕಾಗಿ ಸ್ಥಳೀಯ ತಂತ್ರಜ್ಞಾನಗಳು" ಎಂಬ ವಿಷಯದ ಕು–ರಿತು ಏರ್ಪಡಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ಚಂದ್ರಗಿರಿ ಮಹಿಳಾ ಬಿ.ಎಡ್. ಕಾಲೇಜಿನ ಗೌರಮ್ಮ ಅರಳೀಕಟ್ಟಿ ಪ್ರಥಮ, ಸಂಗೊಳ್ಳಿ ರಾಯಣ್ಣ ಬಿ. ಎಡ್. ಕಾಲೇಜಿನ ರಶ್ಮಿ ಶೀಲಿ ದ್ವಿತೀಯ ಹಾಗೂ ಎಮ್.ಎನ್.ಆರ್. ಎಸ್. ಶಿಕ್ಷಣ ಮಹಾವಿದ್ಯಾಲಯದ ಪಟೀಲ ತೃತೀಯ ಸ್ಥಾನ ಪಡೆದುಕೊಂಡರು.

## ಚಿಕ್ಕೋಡಿಯಲ್ಲಿ ಕೆಎಲ್‌ಇ ಆಂಗ್ಲ ಮಾಧ್ಯಮ ಶಾಲೆಯ ಉದ್ಘಾಟನೆ

ಚಿಕ್ಕೋಡಿ: ಕಳೆದೊಂದು ದಶಕದಲ್ಲಿ ಭಾರತವು ಐದನೇ ಆರ್ಥಿಕಶಕ್ತಿ ವಲಯವಾಗಿ ಬೆಳೆದುನಿಂತಿದೆ. ಔದ್ಯಮಿಕವಾಗಿ, ಆರೋಗ್ಯ, ಶೈಕ್ಷಣಿಕವಾಗಿ ಡಿಜಿಟಲ್ ಭಾರತವು ಪ್ರಕಾಶಿಸುತ್ತಿದೆ. ಇದೆಲ್ಲವೂ ಮೋದಿಜಿಯವರ ಸಮರ್ಥ ನಾಯಕತ್ವದಿಂದ ಸಾಧ್ಯವಾದುದು ಎಂದು ಕೇಂದ್ರ ವಿದೇಶಾಂಗ ಸಚಿವರಾದ ಪದ್ಮ ಶ್ರೀ ಡಾ.ಎಸ್.ಜೈಶಂಕರ ಅವರು ಹೇಳಿದರು.

ಅವರು ಚಿಕ್ಕೋಡಿಯಲ್ಲಿ ಕೆಎಲ್‌ಇ ಸಂಸ್ಥೆಯ ಆಂಗ್ಲ ಮಾಧ್ಯಮ ಶಾಲೆಯ ನೂತನ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದರು. ಕಳೆದ ಹತ್ತು ವರ್ಷಹಿಂದೆ ಭಾರತ ಆರ್ಥಿಕವಾಗಿ ಹನ್ನೊಂದನೆಯ ಸ್ಥಾನವನ್ನು ಹೊಂದಿತ್ತು ಇಂದು ಆತ್ಮ ನಿರ್ಭರ ಯೋಜನೆಗಳಿಂದ ಐದನೇ ಸ್ಥಾನವನ್ನು ಪಡೆದುಕೊಂಡು ಜಗತ್ತಿಗೆ ಒಂದು ಸಂದೇಶವನ್ನು ನೀಡಿದೆ. ಮೋದಿ–ಜಿಯವರು ಕಳೆದ ದಶಕದಿಂದ ದೇಶಕ್ಕೆ ಅದ್ಭುತವಾದ ಯೋಜನೆಗಳನ್ನು ತರುವುದರ ಮೂಲಕ ಭಾರತ ಪ್ರಕಾಶಿಸುವಂತೆ ಮಾಡಿದ್ದಾರೆ. ಅನ್ನಯೋಜನೆ, ಉಜ್ವಲಾ ಯೋಜನೆ, ಆವಾಸ ಯೋಜನೆಗಳಂತಹ ಅಸಂಖ್ಯ ಜನಸಾಮಾನ್ಯರನ್ನೇ ಕೇಂದ್ರವಾಗಿಟ್ಟುಕೊಂಡು ಜಾರಿಗೆ ತಂದ ಯೋಜನೆಗಳು ಭಾರತವನ್ನು ಅಭಿವೃದ್ಧಿಯತ್ತ ಕೊಂಡ್ಯೊದಿದೆ ಎಂದರು. ಭಾರತವು ಡಿಜಟಲೀಕರಣದಿಂದ ಕ್ಯಾಶ್‌ಲೆಸ್ ದೇಶವಾಗಿ ಜಗತ್ತಿನ ಬಹುದೇಶಗಳನ್ನು ವಿಸ್ಮಯಗೊಳಿಸಿದೆ. ಕೋವಿಡ್ ಸಂದರ್ಭದಲ್ಲಿ ನಮ್ಮಲ್ಲಿ ಉತ್ತಮವಾದ ಆಸ್ಪತ್ರೆಗಳು ಇರಲಿಲ್ಲ. ಸೌಲಭ್ಯಗಳು ಇರಲಿಲ್ಲ. ಭಾರತ ಜಾಗತಿ–ಕವಾಗಿ ಕೋವಿಡ್‌ನ್ನು ಎದುರಿಸುವುದು ದುಸ್ತರವೆಂಬುದು ಅನೇಕ ಪ್ರಗತಿಶೀಲದೇಶಗಳ ಅಂಬೋಣವಾಗಿತ್ತು. ಆದರೆ ಭಾರತ ಕೇವಲ ಒಂದುವರ್ಷದ ಅವಧಿಯಲ್ಲಿ ಎಲ್ಲರ ಊಹೆಗಳನ್ನು ಬದಲಾಯಿಸಿತು. ನೂರಕ್ಕೂ ಹೆಚ್ಚು ದೇಶಗಳಿಗೆ ಕೋವಿಡ್ ಲಸಿಕೆಯನ್ನು ನೀಡಿದ ಹೆಮ್ಮೆ ಭಾರತದೇಶದ್ದು. ಇದೆಲ್ಲವೂ ಸಾಧ್ಯವಾಗಿದ್ದು ಮೋದಿಜಿಯವರ ದೂರದೃಷ್ಟಿ ಹಾಗೂ ನಾಯಕತ್ವದ ಗುಣದಿಂದ. ಭಾರತವನ್ನು ವಿದೇಶದವರು ಮೊದಲನಂತೇ ನೋಡುವ ದೃಷ್ಟಿಕೋನ ಬದಲಾಗಿದೆ. ಒಂದು ಕಾಲದಲ್ಲಿ ದೇಶದಲ್ಲಿ 17 ಪಾಸಪೋರ್ಟ್ ಕೇಂದ್ರಗಳು ಇದ್ದವು ಇಂದು 527 ಕೇಂದ್ರಗಳಾಗಿವೆ. ಹೊಸ ಅನ್ವೇಷಣೆಗಳು, ಸ್ಟಾರ್ಟಅಪ್‌ಗಳು, ಉದ್ಯೋಗ–ಶೈಕ್ಷಣಿಕ ಹೊಸ ಕೌಶಲಗಳನ್ನು



ಹುಟ್ಟುಹಾಕಿ ಭಾರತವನ್ನು ಜಾಗತಿಕವಾಗಿ 3ನೇ ಶಕ್ತಿಶೀಲ ರಾಷ್ಟೊವನ್ನಾಗಿ ರೂಪಿಸುವುದು ಮೋದಿಜಿ ಭಾರತದ ಕನಸಾಗಿದೆ ಎಂದು ಜೈಶಂಕರ ಅವರು ಹೇಳಿದರು.

ಕೆಎಲ್‌ಇ ಸಂಸ್ಥೆ ಅಗಾಧವಾಗಿ ಬೆಳೆದಿದೆ: ಕೇಂದ್ರ ಸಚಿವ ಡಾ.ಜೈಶಂಕರ ಅವರು ಮಾತನಾಡುತ್ತ, ಕೆಎಲ್‌ಇ ಸಂಸ್ಥೆಯು ಶಿಕ್ಷಣ ಆರೋಗ್ಯ ಸಂಶೋಧನಾ ಕ್ಷೇತ್ರದಲ್ಲಿ ಅಗಾಧವಾಗಿ ಸಾಧನೆ ಮಾಡಿದೆ. ಡಾ.ಪ್ರಭಾಕರ ಕೋರೆಯವರ ಹಾಗೂ ಅವರ ತಂಡದವರು ಚಿಕ್ಕೋಡಿಯನ್ನು ಬದಲಾಯಿಸಿದ್ದಾರೆ. ನಾನು 45 ವರ್ಷ ನಂತರ ಇಲ್ಲಿ ಬಂದಿದ್ದೇನೆ. ಸಂತೋಷವೆನಿಸುತ್ತಿದೆ. ಇಲ್ಲಿ ಸೇವೆ ಸಲ್ಲಿಸುತ್ತಿರುವ ಸಂದರ್ಭದಲ್ಲಿ ಏನೂ ಇರಲಿಲ್ಲ. ಇಂದು ಚಿಕ್ಕೋಡಿ ಶೈಕ್ಷಣಿಕವಾಗಿ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಬೆಳೆದುನಿಂತಿದೆ. ಇದರ ಹೆಮ್ಮೆ ಮತ್ತೊಂದಿಲ್ಲ. ಕೆಎಲ್‌ಇ ಜಾಗತಿಕವಾಗಿ ಇಂದು ಸಾಕಷ್ಟು ವಿಸ್ತರಿಸಿಕೊಂಡಿದೆ ಅದರ ಹಿಂದೆ ಕೋರೆಯವರ ಕನಸುಗಳುಇಚ್ಛಾಶಕ್ತಿ ಅದ್ವಿತೀಯವೆಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕೇಂದ್ರ ಸಂಸದೀಯ ವ್ಯವಹಾರಗಳು, ಕಲ್ಲಿದ್ದಲು ಮತ್ತು ಗಣಿ ಸಚಿವರಾದ ಪ್ರಹ್ಲಾದ ಜೋಶಿಯವರು ಮಾತನಾಡಿ, ನಾನು ಕೆ–ಎಲ್‌ಇ ಸಂಸ್ಥೆಯ ವಿದ್ಯಾರ್ಥಿ. ಕೆಎಲ್‌ಇ ಕಾಲೇಜಿನ ಮೂಲಕ ಪದವಿಯನ್ನು ಪಡೆದು ಬೆಳೆದವನು. ಅಂದರೆ ಕೆಎಲ್‌ಇ ಸಂಸ್ಥೆಯು ಉತ್ತರ ಕರ್ನಾಟಕದಲ್ಲಿ ಶೈಕ್ಷಣಿಕ ಕ್ರಾಂತಿಯನ್ನು ಮಾಡಿದ್ದರ ಫಲವಾಗಿ ಅಸಂಖ್ಯ ವಿದ್ಯಾರ್ಥಿಗಳ ಬದುಕನ್ನು ಅರಳಿಸಿತು. ಇಂದು ಗ್ರಾಮೀಣ ಭಾಗದಲ್ಲಿ ಶಾಲೆಗಳನ್ನು ಪ್ರಾರಂಭಿಸಿ ಹೊಸ ಕ್ರಾಂತಿಯನ್ನು ಹುಟ್ಟುಹಾಕಿದೆ. ಸಂಸ್ಥೆಯು ಡಾ.ಕೋರೆಯವರ ಸಾರಥ್ಯದಲ್ಲಿ ಹೆಮ್ಮರವಾಗಿ ಬೆಳೆದಿದೆ ಎಂದರು. ಪುಟ್ಟ ಶಾಲೆಯಿಂದ 1916 ರಲ್ಲಿ ಸ್ಥಾಪನೆಗೊಂಡಕೆಎಲ್‌ಇ ಸಂಸ್ಥೆ ಇಂದು 310ಅಂಗ ಸಂಸ್ಥೆಗಳನ್ನು ಮುನ್ನಡೆಸುತ್ತಿದೆ. 1 ಲಕ್ಷ 40 ಸಾವಿರದಷ್ಟು ವಿದ್ಯಾರ್ಥಿಗಳು ಕೆಎಲ್‌ಇ ಶಿಕ್ಷಣಕಾಶಿಯಲ್ಲಿ ಅಧ್ಯಯನದಲ್ಲಿತೊಡಗಿದ್ದಾರೆ. ದಾನಿಗಳು–ಮಹಾದಾನಿಗಳಿಂದ ಬೆಳೆದು ನಿಂತಿರುವಕೆಎಲ್‌ಇ ಸಂಸ್ಥೆ ಇಂದುಜಾಗತಿ–ಕವಾಗಿ ವಿಸ್ತಿರಿಸಿಕೊಂಡಿದೆ. ಕೆ–ಎಲ್‌ಇ ಸಂಸ್ಥೆಯು ಶಿಕ್ಷಢಣ–ಆರೋಗ್ಯ–ಸಂಶೋಧನೆಯ ಮೂಲಕ ಜಾಗತಿಕವಾಗಿ ವಿಸ್ತರಿಸಿದೆ. ಆಲೋಪತಿ–ಆಯುರ್ವೇದ–ಹೋಮಿಯೋಪಥಿ ಮೂರು ಚಿಕಿತ್ಸೆಗಳ ಮೂಲಕ 4500 ಹಾಸಿಗೆಗಳ ಬೃಹತ್ ಆರೋಗ್ಯಜಾಲವನ್ನು ಹೊಂದಿದೆ. ಬೆಳಗಾವಿಯಲ್ಲಿ 300 ಹಾಸಿಗೆಗಳ ಕೆಎಲ್‌ಇ ಕ್ಯಾನ್ಸರ್ ಆಸ್ಪತ್ರೆ ಸಿದ್ದಗೊಂಡಿದೆ. ಮಾತ್ರವಲ್ಲದೆ ಮುಂಬರುವ ದಿನಗಳಲ್ಲಿ ಕೆಎಲ್‌ಇ ಒಲಂಪಿಕ್ಸ್‌ಲ್ಲಿ ಸಾಧನೆಗೆ ಅಣಿಯಾಗಲಿದೆ ಎಂದರು. ಚಿಕ್ಕೋಡಿಯಲ್ಲಿ ಕೆಎಲ್‌ಇ ಆಂಗ್ಲ ಮಾಧ್ಯಮ ಶಾಲೆ ನೂತನ ಕಟ್ಟಡವು ಉದ್ಘಾಟನೆಗೊಳ್ಳುತ್ತಿರುವುದು ನಮ್ಮೆಲ್ಲರಿಗೂ ಹರ್ಷತಂದಿದೆ. ಇತಿಹಾಸದಲ್ಲಿ ಇಂದಿನ ದಿನ ಐತಿಹಾಸಿಕ ಹಾಗೂ ಸುವರ್ಣ ದಿನವೆಂದು ನಾನು ಭಾವಿಸಿದ್ದೇನೆ. ಗಡಿ ಭಾಗದಲ್ಲಿ ಗ್ರಾಮೀಣ ವಿದ್ಯಾರ್ಥಿಗಳ ಗುಣಾತ್ಮಕ ಶಿಕ್ಷಢಣಕ್ಕಾಗಿಯೇ ಕೆಎಲ್‌ಇ ಸಂಸ್ಥೆಯು ಅಂತರಾಷ್ಟೊಥಯ ಗುಣಮಟ್ಟದ ಆಂಗ್ಲ ಮಾಧ್ಯಮ ಶಾಲೆಯನ್ನು ಪ್ರಾರಂಭಿಸಿರುವುದು ಹೆಮ್ಮೆತಂದಿದೆ ಎಂದು ತಿಳಿಸಿದರು. ವೇದಿಕೆಯ ಮೇಲೆ ವಿಧಾನ ಪರಿಷತ್ ಸದಸ್ಯರಾದ ಪ್ರಕಾಶ ಹುಕ್ಕೇರಿ, ಕೆಎಲ್‌ಇ ನಿರ್ದೇಶಕರಾದ ಡಾ.ವಿ.ಎಸ್.ಸಾಧುನವರ, ಚಿಕ್ಕೋಡಿ ಪುರಸಭೆ ಮಾಜಿ ಅಧ್ಯಕ್ಷರಾದ ಪ್ರವೀಣ ಕಾಂಬಳೆ, ಕೆಎಲ್‌ಇ ಕಾರ್ಯದರ್ಶಿ ಡಾ.ಬಿ.ಜಿ.ದೇಸಾಯಿ ಉಪಸ್ಥಿತರಿದ್ದರು. ಡಾ.ಪ್ರಭಾಕರ ಕೋರೆಯವರು ಕೇಂದ್ರ ಸಚಿವ ಡಾ.ಎಸ್.ಜೈ ಶಂಕರ ಅವರಿಗೆ ಬಸವಣ್ಣನವರ ಬೆಳ್ಳಿಯ ಮೂರ್ತಿಯನ್ನು ನೀಡಿ ಸತ್ಕರಿಸಿದರು. ಶಿಕ್ಷಕಿ ಜಿನಲ್ ಶಹಾ, ಗಂಗಾ ಅರಭಾವಿ ನಿರೂಪಿಸಿದರು. ಪ್ರಾಚಾರ್ಯ ಚೇತನ ಅಲವಾಡೆ ವಂದಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089